# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –249 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:27–04–2025 ಭಾನುವಾರ | ಪುಟ: 4 | ಬೆಲೆ : ರೂ.2–00

Volume - 02 Issue - 249 | RNI No: KARKAN/2023/88462 | KA/SK/CTA-874/2024-2026 | Chitradurga | Date: 27-04-2025 Sunday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಡಾ.ರಾಜ್ ಚಲನಚಿತ್ರಗಳಲ್ಲಿವೆ ಉತ್ತಮ ಸಂದೇಶ: ಶಾಸಕ 2

ಈಜಲು ಬಾವಿಗೆ ಇಳಿದ ಯುವಕನಿಗಾಗಿ ಅಗ್ನಿಶಾಮಕ ಸಿಬ್ಬಂದಿಯಿಂದ ಹುಡುಕಾಟ 3

ಕಾಂಗ್ರೆಸ್ ಸರ್ಕಾರದ ನಡೆ ಪಕ್ಷದ ಕಾರ್ಯಕರ್ತರ ಕಡೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಶ್ರೀ ಬಸವೇಶ್ವರ ಜಯಂತಿ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ ಶ್ರೀ ಬಸವೇಶ್ವರ ಜಯಂತಿ ಇದೇ ಏಪ್ರಿಲ್ 30ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸುವರು. ಚಿತ್ರದುರ್ಗ ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಕರ್ನಾಟಕ ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ನಗರಸಭೆ ಅಧ್ಯಕ್ಷೆ ಸುಮಿತಾ ರಾಘವೇಂದ್ರ, ಜಿಲ್ಲಾ ಗ್ಯಾರಂಟಿ ಯೋಜನಾ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ, ವೀರಶೈವ ಸಮಾಜದ ಅಧ್ಯಕ್ಷ ಹೆಚ್.ಎನ್.ತಿಪ್ಪೇಸ್ವಾಮಿ, ಕಾರ್ಯದರ್ಶಿ ಪಿ.ವೀರೇಂದ್ರ ಕುಮಾರ್, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶಿವಮೂರ್ತಿ ಮಹಡಿ, ಪ್ರಧಾನ ಕಾರ್ಯದರ್ಶಿ ಎಂ.ಶಶಿಧರ ಬಾಬು, ವೀರಶೈವ ಲಿಂಗಾಯತ ಮಹಾಸಭಾ ಖಜಾಂಚಿ ಜಾಲಿಕಟ್ಟೆ ರುದ್ರಪ್ಪ ಸೇರಿದಂತೆ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು, ಚುನಾಯಿತ ನಗರಸಭಾ ಸದಸ್ಯರು ಹಾಗೂ ಜಿಲ್ಲೆಯ ವೀರಶೈವ ಸಮಾಜದ ಮುಖಂಡರು, ಗಣ್ಯರು ಪಾಲ್ಗೊಳ್ಳುವರು. ಚಿತ್ರದುರ್ಗ ಜ್ಞಾನಭಾರತಿ ವಿದ್ಯಾಸಂಸ್ಥೆ ಪ್ರಾಂಶುಪಾಲ ಡಾ.ಬಿ.ಎಂ.ಪ್ರಜ್ವಲ್ ಉಪನ್ಯಾಸ ನೀಡುವರು. ಚಿತ್ರದುರ್ಗದ ಶ್ರೀ ಗಾನಯೋಗಿ ಸಂಗೀತ ಬಳಗದಿಂದ ಗೀತಗಾಯನ ನಡೆಯಲಿದೆ. ಬಸವೇಶ್ವರ ಜಯಂತಿ ಅಂಗವಾಗಿ ಅಂದು ಸಂಜೆ 3ಕ್ಕೆ ಚಿತ್ರದುರ್ಗ ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ವಿವಿಧ ಕಲಾ ತಂಡಗಳೊಂದಿಗೆ ಕರ್ನಾಟಕದ ಸಾಂಸ್ಕೃತಿಕ ನಾಯಕರಾದ ವಿಶ್ವಗುರು ಶ್ರೀ ಬಸವೇಶ್ವರರ ಭಾವಚಿತ್ರ ಮೆರವಣಿಗೆ ನಡೆಯಲಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಿ.ಎಂ. ಗುರುನಾಥ ತಿಳಿಸಿದ್ದಾರೆ.

### ಅರ್ಜಿ ಅವಧಿ ವಿಸ್ತರಣೆ

» ಚಿತ್ರದುರ್ಗ

ತೋಟಗಾರಿಕೆ ಇಲಾಖಾ ಅಧೀನದ ತೋಟಗಾರಿಕೆ ತರಬೇತಿ ಕೇಂದ್ರಕ್ಕೆ ರೈತ ಮಕ್ಕಳಿಗೆ 10 ತಿಂಗಳ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಸ್ವೀಕೃತಿ ದಿನಾಂಕವನ್ನು ಏಪ್ರಿಲ್ 28 ಮಧ್ಯಾಹ್ನ 12 ಗಂಟೆಯವರೆಗೆ ವಿಸ್ತರಿಸಲಾಗಿದೆ. ತೋಟಗಾರಿಕೆ ತರಬೇತಿಗೆ ಸಂದರ್ಶನವು ಏಪ್ರಿಲ್ 28ರ ಮಧ್ಯಾಹ್ನ 3 ಗಂಟೆಗೆ ಚಿತ್ರದುರ್ಗ ನಗರದ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯ ತೋಟಗಾರಿಕೆ ಇಲಾಖಾ ಸಭಾಂಗಣದಲ್ಲಿ ನಿಗಧಿಯಾಗಿದೆ. ತರಬೇತಿಗೆ ಆಯ್ಕೆಯಾದವರಿಗೆ ಐಯ್ಯನಹಳ್ಳಿ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ 2025 ರ ಮೇ 02 ರಿಂದ 2026 ರ ಫೆ.28 ರವರೆಗೆ 10 ತಿಂಗಳ ಕಾಲ ತೋಟಗಾರಿಕೆ ತರಬೇತಿ ನೀಡಲಾಗುವುದು ಎಂದು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು ತಿಳಿಸಿದ್ದಾರೆ.

### ಪ್ರವೇಶಕ್ಕಾಗಿ ಅರ್ಜಿ

» ಚಿತ್ರದುರ್ಗ

2020–26ನೇ ಸಾಲಿನಲ್ಲಿ 6ನೇ ತರಗತಿ ಪ್ರವೇಶಕ್ಕಾಗಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮೌಲಾನಾ ಅಜಾದ್ ಮಾದರಿ ಶಾಲೆಗಳಿಗೆ ಅಲ್ಪಸಂಖ್ಯಾತರ ಸಮುದಾಯದವರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್, ಪಾರ್ಸಿ ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಇತರೆ ಹಿಂದುಳಿದ ವರ್ಗಗಳ ಅರ್ಹ ವಿದ್ಯಾರ್ಥಿಗಳು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಸೇವಾಸಿಂಧು ವೆಬ್‌ಸೈಟ್ https://sevasindhu.karnataka.gov.in ನಲ್ಲಿ ಅರ್ಜಿಯನ್ನು ಸಲ್ಲಿಸುವಂತೆ ತಿಳಿಸಿದ್ದಾರೆ

## ಹೊಸದುರ್ಗದ ಅರಿವು ಕೇಂದ್ರಗಳಲ್ಲಿ ಸಮಸ್ಯೆಗಳ ಉಲ್ಬಳ; ದೂರ ಸರಿಯುತ್ತಿರುವ ಓದುಗರು

# ಅನಾನುಕೂಲತೆ ಆಗರ ಅರಿವು ಕೇಂದ್ರ





ನಮ್ಮ ಜನ ವಿಶೇಷ

» ಹೊಸದುರ್ಗ

ಜ್ಞಾನಾರ್ಜನೆ ವೃದ್ಧಿಗಾಗಿ ಪುಸ್ತಕ ಪ್ರಿಯರನ್ನು ಹಾಗೂ ಹವ್ಯಾಸಿ ಓದುಗರನ್ನ ತನ್ನತ್ತ ಕೈ ಬೀಸಿ ಕರೆಯಬೇಕಿದ್ದ ಗ್ರಾಮ ಪಂಚಾಯಿತಿ ಗ್ರಂಥಾಲಯಗಳು ಅಗತ್ಯ ಮೂಲ ಸೌಲಭ್ಯಗಳ ಕೊರತೆಯಿಂದಾಗಿ ಸೊರಗುತ್ತಿವೆ. ಇದರಿಂದಾಗಿ ಬಹಳಷ್ಟು ಓದುಗರು ಅರಿವು ಕೇಂದ್ರಗಳಿಂದ ದೂರ ಸರಿಯುತ್ತಿದ್ದು, ತಾಲೂಕಿನ ಬಹಳಷ್ಟು ಗ್ರಂಥಾಲಯಗಳು ಬರೀ ಸಮಸ್ಯೆಗಳಿಂದಲೇ ತುಂಬಿ ತುಳುಕುತ್ತಿವೆ.

ತಾಲೂಕಿನ ಆನಿವಾಳ, ಬಾಗೂರು, ಬೆಲಗೂರು, ದೇವಪುರ, ದೇವಿಗೆರೆ, ದೊಡ್ಡಘಟ್ಟ, ದೊಡ್ಡಕಿಟ್ಟದಹಳ್ಳಿ, ದೊಡ್ಡ ತೇಕಲವಟ್ಟಿ, ಹೆಗ್ಗೆರೆ, ಹುಣವಿನಡು, ಜಾನಕಲ್, ಕಬ್ಬಳ, ಕೈನಡು, ಕಂಚಿಪುರ, ಕಂಗುವಳ್ಳಿ, ಕೆಲ್ಲೋಡು, ಕುರುಬರಹಳ್ಳಿ, ಲಕ್ಕಿಹಳ್ಳಿ, ಮಾಡದಕೆರೆ, ಮಧುರೆ, ಮಲ್ಲಪ್ಪನಹಳ್ಳಿ, ಮತ್ತೋಡು, ಸಾಣೇಹಳ್ಳಿ, ಶ್ರೀರಾಂಪುರ, ತಂಡಗ ಅರಿವು ಕೇಂದ್ರಗಳಿಗೆ ಸ್ವಂತ ಕಟ್ಟಡವಿದ್ದು, ಇನ್ನುಳಿದ ಅತ್ತಿಮಗ್ಗೆ, ಬಲ್ಲಾಳ ಸಮುದ್ರ, ಬೋಕಿಕೆರೆ, ಚಿಕ್ಕಬ್ಯಾಲದಕೆರೆ, ಗುಡ್ಡದ ನೇರಲಕೆರೆ, ಹೆಬ್ಬಳ್ಳಿ, ಕಾರೇಹಳ್ಳಿ ಮತ್ತು ಎಸ್.ನೇರಲಕೆರೆ ಅರಿವು ಕೇಂದ್ರ ಗ್ರಾ.ಪಂ ಕಟ್ಟಡ, ಖಾದಿ ಮಂಡಳಿ ಕಟ್ಟಡ, ಆರೋಗ್ಯ ಇಲಾಖೆ ಕಟ್ಟಡಗಳಲಿವೆ. ಬಹಳಷ್ಟುಕಟ್ಟಡಗಳುಶಿಥಿಲಾವಸ್ಥೆಯಲ್ಲಿದ್ದು, ಬರೀ ಅನಾನುಕೂಲತೆಗಳಿಂದಲೇ ತುಂಬಿ ತುಳುಕುತ್ತಿವೆ.ಹೊಸದುರ್ಗ ತಾಲೂಕಿನ 4 ಹೋಬಳಿಗಳ ವ್ಯಾಪ್ತಿಯಲ್ಲಿ ಒಟ್ಟು 33 ಗ್ರಾಮ ಪಂಚಾಯಿತಿ ಕೇಂದ್ರಗಳಲ್ಲಿಯೂ ಗ್ರಂಥಾಲಯಗಳಿದ್ದು, ಸ್ಥಳಾವಕಾಶದ ಕೊರತೆ, ಕೂರಲು ಆಸನಗಳ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿರುವ ಸ್ಪರ್ಧಾರ್ಥಿಗಳಿಗೆ ಪರೀಕ್ಷೆಗೆ ಪೂರಕವಾದ ಪುಸ್ತಕಗಳು ದೊರೆಯದೆ ಹಾಗೂ ಡಿಜಿಟಲ್ ಸೌಲಭ್ಯವಿಲ್ಲದೆ ಸೊರಗುತ್ತಿವೆ. ಇನ್ನು ಬಹುತೇಕ ಗ್ರಂಥಾಲಯಗಳ ಕಟ್ಟಡಗಳು ಸಹಾ ಮಳೆಗೆ ಸೋರುತ್ತಿದ್ದು, ಪತ್ರಿಕೆ, ಪುಸ್ತಕಗಳು ಮಳೆಯ ನೀರಿಗೆ ನೆನೆದು ಓದಲು ಬಾರದೆ ಹಾಳಾಗಿರುವ ಉದಾಹರಣೆಗಳಿವೆ. ಇವೆಲ್ಲಾ ಅನಾನುಕೂಲತೆಗಳಿಂದ ಗ್ರಾಮ ಪಂಚಾಯಿತಿಗಳಲ್ಲಿನ ಗ್ರಂಥಾಲಯಗಳಿಗೆ ಬರುತ್ತಿದ್ದ ಓದುಗರ ಸಂಖ್ಯೆಯೂ ಕಡಿಮೆಯಾಗುತ್ತಿದೆ. 'ಪಂಚಾಯಿತಿಯಿಂದ ಕೊಟ್ಟಿರುವ ಕಟ್ಟಡ ಬಹಳ ಚಿಕ್ಕದಾಗಿದ್ದು, ಸ್ಥಳಾವಕಾಶದ ಕೊರತೆಯಿಂದಾಗಿ ಗ್ರಂಥಾಲಯಕ್ಕೆಂದು ಬರುವವರಿಗೆ ಕೂರಲು ಜಾಗವಿಲ್ಲದೆ ಹಿಂದಿರುಗಿ ಹೋಗುತ್ತಿದ್ದಾರೆ. 5 ರಿಂದ 6 ಜನರಿಗೆ ಮಾತ್ರ ಕೂರಲು ಸ್ಥಳವಿದೆ. ಗ್ರಂಥಾಲಯದಲ್ಲಿ ಪುಸ್ತಕಗಳನ್ನು ಜೋಡಿಸಲು ಸರಿಯಾದ ರ್ಯಾಕ್ ವ್ಯವಸ್ಥೆಯಿಲ್ಲ, ಬೀರುಗಳಿಲ್ಲ, ಮಳೆಗಾಲದಲ್ಲಿ ಪುಸ್ತಕಗಳು ನೆನೆದು ಹಾಳಾಗುತ್ತಿವೆ. ತಿಂಗಳಿಗೆ 400 ರೂ. ನೀಡುವುದರಿಂದ 2 ಕನ್ನಡ ಪತ್ರಿಕೆ ಮತ್ತು ಒಂದು ಇಂಗ್ಲೀಷ್ ಪತ್ರಿಕೆಯನ್ನ ತರಿಸಲಾಗುತ್ತಿದೆ. 2 ವರ್ಷಗಳಿಂದಲೂ ಅದು ಕೂಡ ಹಣ ಬಂದಿಲ್ಲ, ನಮ್ಮ ಸ್ವಂತ ಹಣದಲ್ಲಿಯೇ ಪತ್ರಿಕೆಗಳನ್ನ ತರಿಸುತ್ತಿದ್ದೇವೆ. ಜಿಲ್ಲಾ ಪಂಚಾಯಿತಿ ಕಡೆಯಿಂದ ಒಂದು ಕಂಪ್ಯೂಟರ್ ಕೊಟ್ಟಿರುವುದನ್ನು ಬಿಟ್ಟರೆ, ಜೆರಾಕ್ಸ್ ಯಂತ್ರ, ಯುಪಿಎಸ್, ಇಂಟರ್ನೆಟ್, ಓದುಗರಿಗೆ ಸರಿಯಾದ ಆಸನ, ಗಾಳಿಫ್ಯಾನ್ ಮತ್ತು ಕುಡಿಯುವ ನೀರಿನ ವ್ಯವಸ್ಥೆಗಳೇ ಇಲ್ಲ, ಬರೀ ಸಮಸ್ಯೆಗಳಿಂದಲೇ ತುಂಬಿವೆ. ಗ್ರಾ.ಪಂ ಅಧಿಕಾರಿಗಳಿಗೆ ತಿಳಿಸಿದರು ಯಾವುದೇ ಪ್ರಯೋಜನವಾಗಿಲ್ಲ' ವೆಂದು ತಾಲೂಕಿನ ಅರಿವು ಕೇಂದ್ರದ ಗ್ರಂಥಪಾಲಕರೊಬ್ಬರು ತಮ್ಮ ಬೇಸರ ತೋಡಿಕೊಂಡರು.

> ಗ್ರಾಮ ಪಂಚಾಯಿತಿಗಳಲ್ಲಿ ವಸೂಲಿಯಾಗುವ ಕಂದಾಯದಲ್ಲಿ ಶೇ 2 ರಷ್ಟು ಹಣವನ್ನು ಗ್ರಂಥಾಲಯಗಳ ಅಭಿವೃದ್ಧಿಗೆ ಬಳಸಲಾಗುತ್ತಿದೆ. 15ನೇ ಹಣಕಾಸು, ತಾಲೂಕು ಪಂಚಾಯಿತಿ ಅನುದಾನ ಹಾಗೂ ಇತರ ಅನುದಾನಗಳಲ್ಲಿ ಗ್ರಾ.ಪಂ ಅರಿವು ಕೇಂದ್ರಗಳನ್ನು ಅಭಿವೃದ್ಧಿ ಪಡಿಸಲಾಗುತ್ತಿದೆ. ಈಗಾಗಲೇ ಎಲ್ಲಾ ಕೇಂದ್ರಗಳಿಗೆ ಕಂಪ್ಯೂಟರ್ ನೀಡಲಾಗಿದ್ದು, ಶಿಥಿಲಾವಸ್ಥೆಯಲ್ಲಿರುವ ಅರಿವು ಕೇಂದ್ರಗಳ ಕಟ್ಟಡಗಳನ್ನು ಅನುದಾನದ ಮೂಲಕ ಅಭಿವೃದ್ಧಿಪಡಿಸಲಾಗುವುದು. ಗ್ರಾಮೀಣ ಭಾಗದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗಲಿ ಎಂಬ ಉದ್ದೇಶದಿಂದ ಗ್ರಾಮ ಪಂಚಾಯಿತಿ ವತಿಯಿಂದ ಸಹಾಯಧನವನ್ನು ನೀಡಲಾಗುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡಿಸಿಕೊಳ್ಳಬಹುದು.
>
> » **ಸುನಿಲ್ ಕುಮಾರ್, ಕಾರ್ಯನಿರ್ವಾಹಕ ಅಧಿಕಾರಿ ತಾಲೂಕು ಪಂಚಾಯಿತಿ, ಹೊಸದುರ್ಗ**

> ಅಭಿವೃದ್ಧಿಯೆಂದರೆ ಕೇವಲ ರಸ್ತೆ, ಚರಂಡಿ, ಕಟ್ಟಡಗಳನ್ನು ನಿರ್ಮಾಣ ಮಾಡುವುದಲ್ಲ, ಜೊತೆಗೆ ಜನರಲ್ಲಿ ವೈಚಾರಿಕ, ವೈಜ್ಞಾನಿಕ ಮತ್ತು ಸಾಮಾಜಿಕ ಪ್ರಜ್ಞೆಯನ್ನು ಬೆಳೆಸಬೇಕಿದೆ. ಸರ್ಕಾರ ಮೊದಲು ಗ್ರಾಮೀಣ ಭಾಗದಲ್ಲಿ ಸೊರಗುತ್ತಿರುವ ಅರಿವು ಕೇಂದ್ರಗಳನ್ನು ಅಭಿವೃದ್ಧಿಪಡಿಸಿ, ಜನರು ಗ್ರಂಥಾಲಯಗಳತ್ತ ಬರುವ ಕೆಲಸ ಮಾಡಲಿ. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ನಡೆಸುತ್ತಿರುವ ಯುವಕ ಮತ್ತು ಯುವತಿಯರಿಗೆ ಪುಸ್ತಕಗಳ ಅಗತ್ಯವಿದ್ದು, ಪರೀಕ್ಷೆಗಳಿಗೆ ಪೂರಕವಾಗಿರುವ ಪುಸ್ತಕಗಳೇ ಸಿಗುತ್ತಿಲ್ಲ. 2 ಪತ್ರಿಕೆಗಳು ಮಾತ್ರ ಬರುತ್ತಿರುವುದರಿಂದ ಒಬ್ಬರು ಓದಿ ಮುಗಿಸುವವರೆಗೂ ಇನ್ನೊಬ್ಬರು ಕಾದು ಕುಳಿತು ಓದಬೇಕಿದೆ. ಕನಿಷ್ಠ 5 ರಿಂದ 6 ಕನ್ನಡ ಪತ್ರಿಕೆಗಳು, ಮಾಸಪತ್ರಿಕೆಗಳನ್ನು ತರಿಸುವ ಕೆಲಸವಾಗಬೇಕು. ಅರಿವು ಕೇಂದ್ರ ತೆರೆದಿರುವ ಸಮಯವನ್ನು ಕೂಡ ಹೆಚ್ಚಿಸಬೇಕು.
>
> » **ಎಂ.ನಿಂಗರಾಜು ಸ್ಪರ್ಧಾತ್ಮಕ ಪರೀಕ್ಷೆಗೆ ತಯಾರಿ ನಡೆಸುತ್ತಿರುವ ಯುವಕ, ದೇವಪುರ**

# ವಿಶ್ವಮಲೇರಿಯಾ ನಿಯಂತ್ರಣ ಜಾಗೃತಿ ಜಾಥ

» ಚಳ್ಳಕೆರೆ

ತಾಲ್ಲೂಕಿನಾದ್ಯಂತ ಈಗಾಗಲೇ ಮಳೆಗಾಲ ಆರಂಭವಾಗುತ್ತಿದ್ದು, ಸುಲಭವಾಗಿ ರೋಗಗಳು ಹರಡಲು ಆರಂಭಿಸಿವೆ. ಈ ಹಿನ್ನೆಲೆಯಲ್ಲಿ ಆರೋಗ್ಯ ಇಲಾಖೆ ರೋಗಗಳು ವ್ಯಾಪಿಸದಂತೆ ಜಾಗ್ರತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕಜನರಆರೋಗ್ಯವನ್ನುಸದೃಢಗೊಳಿಸಲು ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದೆ. ಆರೋಗ್ಯ ಇಲಾಖೆಯ ಪರಿಶ್ರಮದಿಂದ ನಾವೆಲ್ಲರೂ ಉತ್ತಮ ಆರೋಗ್ಯ ಹೊಂದಿದ್ದೇವೆಂದು ನಗರಸಭೆ ಉಪಾಧ್ಯಕ್ಷೆ ಸುಮಭರಮಣ್ಣ ತಿಳಿಸಿದರು.

ಅವರು, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವಮಲೇರಿಯಾ ಜಾಗೃತಿ ಜಾಥಕ್ಕೆ ಚಾಲನೆ ನೀಡಿ ಮಾತನಾಡಿದರು. ಪ್ರತಿವರ್ಷ ಆರೋಗ್ಯ ಇಲಾಖೆ ಇಂತಹ ಹಲವಾರು ಜಾಗೃತಿ ಕಾರ್ಯಕ್ರಮಗಳನ್ನು ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಡೆಸುವುದರಿಂದ ಎಲ್ಲರೂ ಆರೋಗ್ಯವಂತರಾಗಿದ್ದಾರೆ. ಆರೋಗ್ಯ ಇಲಾಖೆಯ ಸಲಹೆ, ಸೂಚನೆಗಳನ್ನು ಪಾಲಿಸಬೇಕೆಂದರು. ಎನ್.ಜಯಣ್ಣ ಸ್ಕೂಲ್ ಆಫ್ ನರ್ಸಿಂಗ್ ಕಾಲೇಜು ಪ್ರಾಂಶುಪಾಲ ದೇವರಾಜ್ ಮಾತನಾಡಿ, ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಮತ್ತು ಸಿಬ್ಬಂದಿ ವರ್ಗ ಈ ಜಾಗೃತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದೆ. ನಗರ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿ ಮಲೇರಿಯ ನಿಯಂತ್ರಣ ಕುರಿತು ಜಾಗೃತಿ ಮೂಡಿಸಲಾಗಿದೆ. ಜನರ ಆರೋಗ್ಯವನ್ನು ಕಾಪಾಡುವ ದೃಷ್ಟಿಯಿಂದ ಈ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಜಿಲ್ಲಾ ಮೇಲ್ವಿಚಾರಕ ಎಂ.ಲೋಕೇಶ್, ಪ್ರತೀಪ್‌ಕುಮಾರ್, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸಿ.ಎಂ.ಅಮೃತ್‌ರಾಜ್, ಬಿ.ಎಸ್.ರಾಜು ಉಪಸ್ಥಿತರಿದ್ದರು.




ಚಳ್ಳಕೆರೆ ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವಮಲೇರಿಯಾ ದಿನಾಚರಣೆ ಜಾಗೃತಿ ಜಾಥ ನಡೆಸಲಾಯಿತು.

## ಪ್ರಮುಖ ಸುದ್ದಿ

### ಬೇಡಿಕೆಗಳನ್ನು ಈಡೇರಿಸ ಸರ್ಕಾರದ ವಿರುದ್ಧ ಪೌರನೌಕರರ ಪ್ರತಿಭಟನೆ

# ಬೇಡಿಕೆ ಈಡೇರದಿದ್ದರೆ ಮೇ.27ರಿಂದ ಮುಷ್ಕರ

» ಚಳ್ಳಕೆರೆ

ಕಳೆದ ಹಲವಾರು ದಶಕಗಳಿಂದ ನಗರಸಭೆಯಲ್ಲಿ ಎಲ್ಲಾ ಹಂತದಲ್ಲೂ ಕಾರ್ಯನಿರ್ವಹಿಸುತ್ತಿರುವ ಪೌರನೌಕರರ ಬೇಡಿಕೆಗಳನ್ನು ರಾಜ್ಯ ಸರ್ಕಾರ ಈಡೇರಿಸದೆ ವಿಳಂಬ ನೀತಿ ಅನುಸರಿಸುತ್ತಿದ್ದು, ರಾಜ್ಯ ಪೌರನೌಕರರ ಸಂಘದ ಆದೇಶದಂತೆ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಿ ಕೈಗೆ ಕಪ್ಪುಪಟ್ಟಿಕಟ್ಟಿಕೊಂಡು ಇಂದಿನಿಂದಲೇ ಮುಷ್ಕರ ಆರಂಭಿಸಿರುವುದಾಗಿ ಪೌರನೌಕರರ ಸಂಘದ ಅಧ್ಯಕ್ಷ ಈ.ತಿಪ್ಪೇಸ್ವಾಮಿ ತಿಳಿಸಿದರು.

ಅವರು, ಪೌರಾಯುಕ್ತರು ಮತ್ತು ತಹಶೀಲ್ದಾರ್‌ಗೆ ಮನವಿ ನೀಡಿ ಪತ್ರಿಕೆಯೊಂದಿಗೆ ಮಾತನಾಡಿದರು. ರಾಜ್ಯ ಸಂಘದ ನಿರ್ದೇಶನದ ಮೇರೆಗೆ ಈಗಾಗಲೇ ಏ.12ರಿಂದಮೇ.26ರ ತನಕ ಎಲ್ಲಾ ಪೌರನೌಕರರು ಕಪ್ಪುಪಟ್ಟಿಕಟ್ಟಿ ಕೊಂಡು ಪ್ರತಿಭಟನೆಯಲ್ಲೇ ಕಾರ್ಯನಿರ್ವಹಿಸು ತ್ತಿದ್ದಾರೆ. ರಾಜ್ಯ ಸರ್ಕಾರ ಮೇ.26ರೊಳಗೆ ನಮ್ಮ ಬೇಡಿಕೆಗಳನ್ನು ಈಡೇರಿಸದೇ ಇದ್ದಲ್ಲಿ ಮೇ.27ರಿಂದ ಅನಿರ್ಧಿಷ್ಟಾಕಾಲ ಮುಷ್ಕರವನ್ನು ಕೈಗೊಳ್ಳಲಾಗುವುದು. ಸಾರ್ವಜನಿಕರಿಗೆ ಆಗುವ ತೊಂದರೆಗೆ ರಾಜ್ಯ ಪೌರನೌಕರರ ಸಂಘ ವಿಷಾದ ವ್ಯಕ್ತಪಡಿಸುತ್ತಲ್ಲದೆ, ಸರ್ಕಾರ ಪೌರನೌಕರರ ಬೇಡಿಕೆಗಳನ್ನು ಈಡೇರಿಸುವಲ್ಲಿ ವಿಫಲವಾಗಿರುವುದನ್ನು ಸಂಘ ಖಂಡಿಸುತ್ತದೆ ಎಂದರು.



ಈಗಾಗಲೇ ಪ್ರತಿಭಟನೆಯಲ್ಲಿ ಎಲ್ಲಾ ಹಂತದ ಪೌರನೌಕರರು ಭಾಗವಹಿಸಿದ್ದು ಪೌರಾಯುಕ್ತರು ಮತ್ತು ತಹಶೀಲ್ದಾರ್‌ಗೆ ಮನವಿ ನೀಡಲಾಗಿದೆ. ಪ್ರತಿಭಟನೆ ಸಂದರ್ಭದಲ್ಲೂ ಸಹ ಸಾರ್ವಜನಿಕರಿಗೆ ತೊಂದರೆಯಾಗುವ ದೃಷ್ಟಿಯಿಂದ ಮೇ.26ರ ತನಕ ಕಾರ್ಯನಿರ್ವಹಿಸುತ್ತೇವೆ. ಮೇ.27ರಿಂದ ರಾಜ್ಯ ಸರ್ಕಾರದ ವಿರೋಧಿ ನೀತಿಖಂಡಿಸಿ ಮುಷ್ಕರವನ್ನು ಮುಂದುವರೆಸಲಾಗುವುದು ಎಂದರು. ಪ್ರತಿಭಟನೆಯಲ್ಲಿ ಪರಿಸರ ಇಂಜಿನಿಯರ್ ನರೇಂದ್ರಬಾಬು, ಆರೋಗ್ಯ ನಿರೀಕ್ಷಕರಾದ ಮಹಲಿಂಗಪ್ಪ, ಗಣೇಶ್, ಗೀತಾಕುಮಾರಿ, ರುದ್ರಮುನಿ, ನಾಗರಾಜು, ವಿಶ್ವನಾಥ, ಚೇತನ್, ಸತೀಶ್, ಪ್ರದೀಪ್, ವೀರಭದ್ರಪ್ಪ, ಓಬಳೇಶ್, ಓಬಣ್ಣ, ರಾಜೇಶ್, ಗುರು ಮೂರ್ತಿ, ಭೂತಣ್ಣ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಂದ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿಗೆ ಅರಿವು ಶೈಕ್ಷಣಿಕ ಸಾಲ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸಲು ಮತೀಯ ಅಲ್ಪಸಂಖ್ಯಾತರಾದ ಮುಸ್ಲಿಂ, ಕ್ರಿಶ್ಚಿಯನ್, ಜೈನ್ಸ್, ಬೌದ್ಧರು, ಸಿಖ್ಖರು, ಪಾರ್ಸಿಗಳು ಮತ್ತು ಆಂಗ್ಲೋ ಇಂಡಿಯನ್ ಸಮುದಾಯದ ವಿದ್ಯಾರ್ಥಿಗಳಿಂದ ಸಿಇಟಿ, ನೀಟ್ ಮೂಲಕ ವೃತ್ತಿಪರ ಕೋರ್ಸ್‌ಗಳಿಗೆ ಪ್ರವೇಶ ಪಡೆಯಬಯಸುವ ವಿದ್ಯಾರ್ಥಿಗಳಿಗೆ ನಿಗಮದಿಂದ ಒದಗಿಸುವ ಅರಿವು ಯೋಜನೆಯಡಿ ಸಾಲ ಸೌಲಭ್ಯವನ್ನು ಒದಗಿಸಲು ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೇ 23 ಅರ್ಜಿ ಸಲ್ಲಿಸಲು ಕೊನೆಯ ದಿನ. ನಿಗಮದ ವೆಬ್‌ಸೈಟ್ kmdconline.karnataka.gov.in ತೆರೆದು ಲಿಂಕ್‌ಗೆ ಕ್ಲಿಕ್ ಮಾಡಬೇಕು. ನಂತರ ಅರ್ಜಿಯನ್ನು ಭರ್ತಿ ಮಾಡಿ ಪ್ರಿಂಟ್ ಕಾಪಿಯನ್ನು ಜಿಲ್ಲಾ ಕಛೇರಿಗೆ ಸಲ್ಲಿಸಬೇಕು. ಅಂತಹ ವಿದ್ಯಾರ್ಥಿಗಳು ಭರಿಸಬೇಕಾದ ಬೋಧನಾ ಶುಲ್ಕಕ್ಕಾಗಿ ನಿಗಮದಿಂದ ಮಂಜೂರು ಮಾಡುವ ಸಾಲವನ್ನು ಅವರು ವ್ಯಾಸಂಗ ಮಾಡುವ ಕಾಲೇಜಿಗೆ ಮುಂಚಿತವಾಗಿ ನೇರವಾಗಿ ಹಣಪಾವತಿ ಮಾಡಲಾಗುವುದು. ಆನ್‌ಲೈನ್ ಅರ್ಜಿಯನ್ನು ಕಂಪ್ಯೂಟರ್ ನಲ್ಲಿ ಭರ್ತಿ ಮಾಡಿದ ಕೂಡಲೇ ಅರ್ಜಿಯ ಪ್ರಿಂಟೌಟನ್ನು ತೆಗೆದುಕೊಂಡು SSLC, PUC Marks Card, Adhar card, Caste & Income, ID Card, Ration Card, Student & Parents Photos, CET/ NEET All Copies & Hall Ticket, Indemnity bond with Notary ಈ ಎಲ್ಲ ದಾಖಲಾತಿಗಳನ್ನು ಮೇ 23 ರೊಳಗೆ ನಿಗಮದ ಜಿಲ್ಲಾ ಕಚೇರಿಗೆ ಸಲ್ಲಿಸಿದ್ದಲ್ಲಿ ಸಾಲ ಬಿಡುಗಡೆ ಮಾಡುವ ಬಗ್ಗೆ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ದೂರವಾಣಿ ಸಂಖ್ಯೆ 08194–226412, 8431669372 (ವಿಷಯ ನಿರ್ವಹಕರು), 8277944213 ಮತ್ತು ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ (ನಿ), ಜಿಲ್ಲಾ ಪಂಚಾಯತ್, ಜಿಲ್ಲಾ ವ್ಯವಸ್ಥಾಪಕರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

### ಬಾಲಕಿ ಕಾಣೆ

» **ಚಿತ್ರದುರ್ಗ**

ಹೊಳಲ್ಕೆರೆ ತಾಲ್ಲೂಕು ತೇಕಲವಟ್ಟಿ ಗೊಲ್ಲರಹಟ್ಟಿ ಗ್ರಾಮದ ನಿವಾಸಿ ಶೈಲಜಾ ಎಂಬ ಬಾಲಕಿ 2025ರ ಮಾರ್ಚ್ 19ರಂದು ಕಾಣೆಯಾಗಿರುವ ಪ್ರಕರಣ ಹೊಳಲ್ಕೆರೆ ತಾಲ್ಲೂಕು ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಬಾಲಕಿಯ ಚಹರೆ ಇಂತಿದೆ. ಶೈಲಜಾ ತಂದೆ ಶಿವಪ್ಪ, 17 ವರ್ಷ, 5 ಅಡಿ ಎತ್ತರವಿದ್ದು, ಎಣ್ಣೆಗೆಂಪು ಬಣ್ಣ ಹೊಂದಿದ್ದಾರೆ. ಮನೆಯಿಂದ ಹೋಗುವಾಗ ಬಿಳಿ ಬಣ್ಣದ ಹಳದಿ ಚುಕ್ಕಿಗಳಿರುವ ಚೂಡಿದಾರ ಧರಿಸುತ್ತಾರೆ. ಈ ಮೇಲ್ಕಂಡ ಚಹರೆವುಳ್ಳ ಬಾಲಕಿ ಪತ್ತೆಯಾದಲ್ಲಿ ಚಿತ್ರಹಳ್ಳಿ ಗೇಟ್ ಪೊಲೀಸ್ ಠಾಣೆಗೆ ಸಂಪರ್ಕಿಸುವಂತೆ ಪೊಲೀಸ್ ಉಪನಿರೀಕ್ಷಕರು ಮನವಿ ಮಾಡಿದ್ದಾರೆ.

### 29ಕ್ಕೆ ಸಾರಿಗೆ ಅದಾಲತ್

» **ಚಿತ್ರದುರ್ಗ**

ಪ್ರಾದೇಶಿಕ ಸಾರಿಗೆ ಅಧಿಕಾರಿಗಳವರ ಕಚೇರಿ ವತಿಯಿಂದ ಇದೇ ಏ.29 ರಂದು ಸಂಜೆ 4 ರಿಂದ 5.30 ರವರೆಗೆ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ ಆವರಣದಲ್ಲಿ ಸಾರಿಗೆ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆ ಆಲಿಸಲು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ “ಸಾರಿಗೆ ಅದಾಲತ್” ಏರ್ಪಡಿಸಲಾಗಿದೆ. ಸಾರ್ವಜನಿಕರು ಸಾರಿಗೆ ಅದಾಲತ್‌ನಲ್ಲಿ ಭಾಗವಹಿಸಿ ಇಲಾಖೆಗೆ ಸಂಬಂಧಿಸಿದ ಕುಂದುಕೊರತೆಗಳನ್ನು ಹಾಗೂ ತಮ್ಮ ಅಹವಾಲುಗಳನ್ನು ಸಲ್ಲಿಸಿ ಪರಿಹಾರ ಪಡೆದುಕೊಳ್ಳಬೇಕು ಹಾಗೂ ಸಾರಿಗೆ ಅದಾಲತ್‌ನ ಸದುಪಯೋಗವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು.

### ತ್ರೈಮಾಸಿಕ ಕೆಡಿಪಿ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಪಂಚಾಯತ್ ಮೊದಲನೇ ತ್ರೈಮಾಸಿಕ ಕೆ.ಡಿ.ಪಿ ಪ್ರಗತಿ ಪರಿಶೀಲನಾ ಸಭೆ ಮೇ 02 ರಂದು ಬೆಳಿಗ್ಗೆ 10.30 ಕ್ಕೆ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಡೆಯಲಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ (ಪಪ್ಪಿ) ಅಧ್ಯಕ್ಷತೆಯಲ್ಲಿ ಮತ್ತು ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿ ಅವರ ಉಪಸ್ಥಿತಿಯಲ್ಲಿ ಸಭೆ ನಿಗದಿಪಡಿಸಲಾಗಿದೆ. ಸಭೆಯಲ್ಲಿ ವಿವಿಧ ಇಲಾಖೆಗಳ ಕಳೆದ ಮಾರ್ಚ್ ಅಂತ್ಯದವರೆಗಿನ ಪ್ರಗತಿ ಪರಿಶೀಲನೆ ನಡೆಯಲಿದೆ.

### ಇದೇ 27ರಂದು ಮಾಸಿಕ ಗಮಕ ವಾಚನ-ವ್ಯಾಖ್ಯಾನ

» **ಚಿತ್ರದುರ್ಗ**

ನಗರದ ಗಮಕ ಕಲಾಭಿಮಾನಿಗಳ ಸಂಘವು ನಡೆಸಿಕೊಂಡುಬರುತ್ತಿರುವಮಾಸಿಕಗಮಕವಾಚನ ವ್ಯಾಖ್ಯಾನ ಸಂಭ್ರಮದ 21ನೇ ಕಾರ್ಯಕ್ರಮವು ತಾ.27–04–2025ರ ಭಾನುವಾರ ಸಂಜೆ 6 ಗಂಟೆಯಿಂದ ನಗರದ ಜೆ.ಸಿ.ಆರ್.ಗಣಪತಿ ದೇವಾಲಯದ ಪ್ರಾಂಗಣದಲ್ಲಿ ನಡೆಯಲಿದೆ.

**ಡಾ.ರಾಜ್ ಕುಮಾರ್‌ರವರ 97ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ**

# ಡಾ.ರಾಜ್ ಚಲನಚಿತ್ರಗಳಲ್ಲಿವೆ ಉತ್ತಮ ಸಂದೇಶ

» **ಚಿತ್ರದುರ್ಗ**

ನಟಸಾರ್ವಭೌಮ, ವರನಟ ಡಾ. ರಾಜ್ ಕುಮಾರ್ ಅವರ ಚಲನಚಿತ್ರಗಳು ನಮ್ಮ ನಿತ್ಯದ ಜೀವನಕ್ಕೆ ಅನುಕೂಲ ಹಾಗೂ ಅಳವಡಿಸಿಕೊಳ್ಳುವ ರೀತಿಯಲ್ಲಿ ಉತ್ತಮ ಸಂದೇಶ ನೀಡಿದ್ದಾರೆ ಎಂದು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ನಟಸಾರ್ವಭೌಮ ಡಾ.ರಾಜ್‌ಕುಮಾರ್‌ರವರ 97ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಡಾ.ರಾಜ್ ಕುಮಾರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

ಒಂದು ಕುಗ್ರಾಮದ ಮುತ್ತುರಾಜ್ ಅವರು ಚಲನಚಿತ್ರ ಇತಿಹಾಸದಲ್ಲಿಯೇ ಮೈಲಿಗಲ್ಲಾಗಿ, ಡಾ.ರಾಜ್‌ಕುಮಾರ್ ಆಗಿ ಜವಾಬ್ದಾರಿ ನಿಭಾಯಿಸುವುದರ ಜತೆಗೆ ನಮ್ಮೆಲ್ಲರಿಗೂ ಉತ್ತಮ ಸಂದೇಶ ನೀಡುವ 200ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಾಯಕ ನಟರಾಗಿ ನಟಿಸಿ, ಅರ್ಪಣೆ ಮಾಡಿದ್ದಾರೆ ಎಂದು ತಿಳಿಸಿದ ಅವರು, 2017ರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಾ. ರಾಜ್ ಕುಮಾರ್ ಅವರ ಜನ್ಮ ದಿನಾಚರಣೆಯನ್ನು ಸರ್ಕಾರಿ ಕಾರ್ಯಕ್ರಮವಾಗಿ ಆಚರಿಸಲು ಆದೇಶ ಮಾಡಿದರು ಎಂದರು.

ಡಾ.ರಾಜ್ ಕುಮಾರ್ ಅವರು ತಮ್ಮ ಇಚ್ಚೆಯಂತೆ ಮರಣದ ನಂತರ ತಮ್ಮ ನೇತ್ರಗಳನ್ನು ದಾನ ಮಾಡಿದ್ದಾರೆ. ಇಂದಿಗೂ ಡಾ.ರಾಜ್ ಕುಮಾರ್ ಅವರ ಹೆಸರಿನಲ್ಲಿ ನೇತ್ರದಾನ ಶಿಬಿರಗಳು ನಡೆಯುತ್ತಿವೆ. ಐಎಎಸ್, ಐಪಿಎಸ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರಗಳ ಸ್ಥಾಪನೆ, ಅನಾಥಾಶ್ರಮಗಳಿಗೂ ನೆರವು ನೀಡಿದ್ದಾರೆ.



ಡಾ.ರಾಜ್ ಕುಮಾರ್ ಮರಣದ ನಂತರ ಅವರ ಕುಟುಂಬವು ಸಹ ಡಾ.ರಾಜ್ ರೂಪಿಸಿರುವ ಕಾರ್ಯಕ್ರಮಗಳನ್ನು ಮುಂದುವರೆಸಿಕೊಂಡು ಹೋಗುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಪರಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಡಾ.ರಾಜ್ ಕುಮಾರ್ ಅವರು ಸರಳತೆ ಮತ್ತು ಜೀವನ ಮೌಲ್ಯದ ತತ್ವಗಳ ಪಾಲನೆ ಮಾಡುವ ಮೂಲಕ ಬದುಕಿರುವರೆಗೂ ಸದಾ ಲವಲವಿಕೆಯಿಂದ ಇದ್ದರು. ಡಾ.ರಾಜ್ ಕುಮಾರ್ ನಟನೆಯ ಪ್ರತಿಯೊಂದು ಚಿತ್ರದಲ್ಲಿಯೂ ಒಂದು ತತ್ವ ಹಾಗೂ ಸಂದೇಶವಿದೆ. ಮನೆಯ ಕುಟುಂಬದ ಸದಸ್ಯರೆಲ್ಲರೂ ಸೇರಿ ಒಟ್ಟಿಗೆ ಕುಳಿತು ನೋಡುವ ಚಲನಚಿತ್ರಗಳಾಗಿವೆ ಎಂದರು.

ಡಾ.ರಾಜ್ ಕುಮಾರ್ ಅವರು ಕನ್ನಡ ಸಾಹಿತ್ಯ ಹಾಗೂ ಸಂಗೀತಕ್ಕೆ ಅಮೂಲ್ಯವಾದ ಕೊಡುಗೆ ನೀಡಿದ್ದಾರೆ. ಡಾ.ರಾಜ್ ಅವರ ಮರಣದ ನಂತರವೂ ಸಹ ಅವರ ಕಣ್ಣುಗಳು ಇನ್ನೊಬ್ಬರ ಬಾಳಿಗೆ ಬೆಳಕಾಗಿವೆ. ಅವರ ಸಂದೇಶದಲ್ಲಿ ನಾವೆಲ್ಲರೂ ಸಾಗೋಣ ಎಂದು ಹೇಳಿದರು.

ಸಾಹಿತಿ ಹುರಳಿ ಎಂ ಬಸವರಾಜ್ ಉಪನ್ಯಾಸ ನೀಡಿ, ಡಾ.ರಾಜ್ ಕುಮಾರ್ ಅವರು ಸರಳ, ಸಜ್ಜನಿಕೆ, ವಿನಯ ವಂತಿಕೆಯ ಆದರ್ಶ ವ್ಯಕ್ತಿಯಾಗಿದ್ದಾರೆ. ಡಾ.ರಾಜ್ ನಟಿಸಿದ ಸಿನಿಮಾಗಳೆಲ್ಲವೂ ಸೂಪರ್ ಹಿಟ್ ಸಿನಿಮಾಗಳಾಗಿವೆ. ಬೇಡರ ಕಣ್ಣಪ್ಪ ಎಂಬ ಮೊದಲನೇ ಸಿನಿಮಾ, ನಂತರ 100 ನೇ ಸಿನಿಮಾ ಭಾಗ್ಯದ ಬಾಗಿಲು, 150ನೇ ಸಿನಿಮಾ ಗಂಧದ ಗುಡಿ ಹಾಗೂ 200ನೇ ಸಿನಿಮಾವಾಗಿ ದೇವತಾ ಮನುಷ್ಯ, ಅವರ ಕೊನೆಯ ಕ್ಷಣದಲ್ಲಿ ನಟಿಸಿದ ಶಬ್ಧವೇದಿ ಸಿನಿಮಾ ಅಭೂತಪೂರ್ವವಾದ ಯಶಸ್ವಿಗಳಿಸಿತು. ರಾಜ್ ಕುಮಾರ್ ನಟಿಸಿದ ಕಸ್ತೂರಿ ನಿವಾಸ, ಸಾಕ್ಷಾತ್ಕಾರ, ಹೊಸ ಬೆಳಕು, ಬಬ್ರುವಾಹನ, ಹಾಲುಜೇನು, ಶ್ರೀಕೃಷ್ಣದೇವರಾಯ, ಇಮ್ಮಡಿ ಪುಲಿಕೇಶಿ, ಮಂತ್ರಾಲಯ ಮಹಾತ್ಮೆ, ಶ್ರೀನಿವಾಸ ಕಲ್ಯಾಣ ಸೇರಿದಂತೆ ನೂರಾರು ಚಲನಚಿತ್ರಗಳಲ್ಲಿ ಅಭಿನಯಿಸುತ್ತಾ ದಕ್ಷಣ ಭಾರತದ ಸಿನಿಮಾ ಜಗತ್ತಿನಲ್ಲಿ ತಾವು ನಟಿಸಿದ ಎಲ್ಲ ಸಿನಿಮಾಗಳಲ್ಲಿ ನಾಯಕ ನಟನಾಗಿ ನಟಿಸಿದ ಏಕೈಕ ವ್ಯಕ್ತಿ ವರನಟ ಡಾ.ರಾಜ್ ಕುಮಾರ್ ಎಂದು ಹೇಳಿದರು.

ಡಾ.ರಾಜ್ ನಟಿಸಿದ ಎಲ್ಲ ಪಾತ್ರಗಳಿಗೂ ಸಹ ಜೀವಕಳೆ ತಂದುಕೊಡುತ್ತಾರೆ. ಹಳ್ಳಿಹೈದನಾಗಿ, ಕುರಿ ಕಾಯುವವನಾಗಿ, ರಾಜನಾಗಿ, ಸಾಮ್ರಾಜ್ಯದ ಒಡೆಯನಾಗಿ, ಮನೆಯ ಯಜಮಾನನಾಗಿ ನಟಿಸಿದ ಎಲ್ಲ ಚಿತ್ರಗಳಲ್ಲಿಯೂ ಸಹ ಅಭೂತಪೂರ್ವ ಪ್ರತಿಮೆ ಹೊರಹೊಮ್ಮುತ್ತದೆ ಎಂದರು.

ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ತಾಜ್‌ಪೀರ್ ಮಾತನಾಡಿ, ತೆರೆಯ ಮೇಲಾದರೂ ಸರಿ ದುಶ್ಚಟವನ್ನು ಬಿಂಬಿಸುವ ಯಾವುದೇ ಪಾತ್ರವನ್ನು ಡಾ. ರಾಜ್‌ಕುಮಾರ್ ಅವರು ಅಭಿನಯಿಸಲಿಲ್ಲ. ಡಾ.ರಾಜ್ ಅವರಿಗೂ ಚಿತ್ರದುರ್ಗಕ್ಕೂ ಬಹಳ ನಂಟಿದೆ. ಡಾ.ರಾಜ್ ಅವರಿಗೆ “ಕುಮಾರ ರಾಜ್” ಎಂದು ಚಿತ್ರದುರ್ಗದವರು ಬಿರುದು ನೀಡಿದ್ದಾರೆ ಎಂದು ಸ್ಮರಿಸಿದ ಅವರು, ಮುಂಬರುವ ದಿನಗಳಲ್ಲಿ ಡಾ.ರಾಜ್ ಅವರ ಜನ್ಮದಿನದ ಶತಮಾನೋತ್ಸವದ ಅಂಗವಾಗಿ ಡಾ.ರಾಜ್ ಹೆಸರಿನಲ್ಲಿ ನೆನಪಿನಲ್ಲಿ ಉಳಿಯುವಂತಹ ಕಾರ್ಯ ಮಾಡುವಂತೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅವರಿಗೆ ಮನವಿ ಮಾಡಿದರು.

ಜಿಲ್ಲಾ ವಾರ್ತಾಧಿಕಾರಿ ಬಿ.ವಿ. ತುಕಾರಾಂರಾವ್ ಪ್ರಾಸ್ತಾವಿಕವಾಗಿ ಮಾತನಾಡಿ, ಡಾ.ರಾಜ್ ಕುಮಾರ್ ಅವರು ಸುಮಾರು 200ಕ್ಕೂ ಹೆಚ್ಚು ಚಲನಚಿತ್ರಗಳಲ್ಲಿ ನಾಯಕ ನಟರಾಗಿ ವೈವಿಧ್ಯಮಯವಾದ ಪಾತ್ರಗಳಲ್ಲಿ ಅಭಿನಯ ಮಾಡಿದ್ದಾರೆ. ಯಾವುದೇ ಪಾತ್ರವಾದರೂ ಸಹ ಅದರಲ್ಲಿ ತಲ್ಲೀನರಾಗಿ ನಟಿಸುತ್ತಿದ್ದ ರೀತಿ ಬಹಳ ಮೆಚ್ಚುಗೆಗೆ ಪಾತ್ರವಾಗಿದೆ. ಡಾ.ರಾಜ್ ಕುಮಾರ್ ಅವರಿಗೆ ನಟಸಾರ್ವಭೌಮ, ರಸಿಕರ ರಾಜ, ವರನಟ ಸೇರಿದಂತೆ ಅನೇಕ ಬಿರುದುಗಳಿವೆ. ಬಹುತೇಕ ಎಲ್ಲರೂ ಡಾ.ರಾಜ್ ಅವರನ್ನು ಅಣ್ಣಾವ್ರು ಎಂದು ಕರೆಯುತ್ತಾರೆ ಎಂದು ತಿಳಿಸಿದ ಅವರು, ನಟನೆ ಹಾಗೂ ಗಾಯನಕ್ಕೆ ರಾಷ್ಟ್ರಪ್ರಶಸ್ತಿ ಪಡೆದ ಏಕೈಕ ಕಲಾವಿದ ಡಾ.ರಾಜ್ ಕುಮಾರ್ ಎಂದು ತಿಳಿಸಿದರು.

ರಾಜ್ ಕುಮಾರ್ ಅವರು ತನ್ನ ಪಾತ್ರಗಳ ಆಯ್ಕೆಯಲ್ಲಿ ಬಹಳ ಜಾಗೃತೆ ವಹಿಸುತ್ತಿದ್ದರು. ಅವರಿಗಿದ್ದ ಅಪಾರ ಅಭಿಮಾನಿಗಳಿಗೆ ಅವರ ಪಾತ್ರಗಳು ಸಮಾಜ ಕಂಟಕ ಸಂದೇಶ ಕೊಡಬಾರದು ಎಂಬ ಕಾಳಜಿ ಅವರಿಗಿತ್ತು ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಆರ್.ಶಿವಣ್ಣ ಮಾತನಾಡಿ, ಅಂತರಾಷ್ಟ್ರೀಯ ಮಟ್ಟದಲ್ಲಿ ಖ್ಯಾತಿಗಳಿಸಿದ ಕನ್ನಡದ ಮೇರು ನಟ ಡಾ.ರಾಜ್ ಕುಮಾರ್. ನಾಡು–ನುಡಿಯ ಹೋರಾಟದ ಜತೆಗೆ ಚಲನಚಿತ್ರಗಳಲ್ಲಿ ಸಮಾಜಕ್ಕೆ ಉತ್ತಮ ಸಂದೇಶ ನೀಡಿದ್ದಾರೆ ಎಂದರು.

ಕಾರ್ಯಕ್ರಮದಲ್ಲಿ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಡಿ.ಎನ್.ಮೈಲಾರಪ್ಪ, ಕೆಡಿಪಿ ಸದಸ್ಯ ನಾಗರಾಜ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಚಂದ್ರಕಾಂತ್ ನಾಗಸಮುದ್ರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ, ರಂಗಕರ್ಮಿ ಕೆಪಿಎಂ ಗಣೇಶಯ್ಯ ಸೇರಿದಂತೆ ಡಾ. ರಾಜ್ ಕುಮಾರ್ ಅಭಿಮಾನಿಗಳು ಇದ್ದರು. ಚಿತ್ರದುರ್ಗದ ಎಂ.ಕೆ.ಹರೀಶ್ ಮತ್ತು ಸಂಗಡಿಗರು ಡಾ. ರಾಜ್‌ಕುಮಾರ್ ಅವರ ಗೀತಗಾಯನ ನಡೆಸಿಕೊಟ್ಟರು.

## ವಿವಿಧ ಬೇಡಿಕೆ ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಪ್ರತಿಭಟನೆ; ತಹಶೀಲ್ದಾರ್‌ಗೆ ಮನವಿ

» **ಚಳ್ಳಕೆರೆ**

ತಾಲ್ಲೂಕಿನನಾಯಕನಹಟ್ಟಿಮತ್ತುತಳಕುವ್ಯಾಪ್ತಿಯ ಹಲವಾರು ಗ್ರಾಮಗಳಿಗೆ ಕೆಎಸ್‌ಆರ್‌ಟಿಸಿ ಬಸ್‌ಗಳ ಸೌಲಭ್ಯವಿಲ್ಲದೆ ಸಾರ್ವಜನಿಕರು, ವಿದ್ಯಾರ್ಥಿಗಳು ಕೂಲಿಕಾರ್ಮಿಕರು ಪರದಾಡುತ್ತಿದ್ದು ಕೂಡಲೇ ಬಸ್‌ಗಳ ವ್ಯವಸ್ಥೆ ಮಾಡಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಂಘದ ಹಿರಿಯಉಪಾಧ್ಯಕ್ಷ ಬೇಡರೆಡ್ಡಿಹಳ್ಳಿಬಸವರೆಡ್ಡಿ ಒತ್ತಾಯಿಸಿದರು.

ಅವರು, ಗುರುವಾರ ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿ, ತಹಶೀಲ್ದಾರ್‌ಗೆ ವಿವಿಧ ಬೇಡಿಕೆ ಈಡೇರಿಸುವಂತೆ ಮನವಿ ನೀಡಿ ಮಾತನಾಡಿದರು.

ಎನ್.ದೇವರಹಳ್ಳಿ, ತಿಮ್ಮಪ್ಪಯ್ಯಹಳ್ಳಿ, ಗಜ್ಜುಗಾನಹಳ್ಳಿ, ರುದ್ರಮ್ಮನಹಳ್ಳಿ ಕೆರೆಯಾಗಳಹಟ್ಟಿ ಸೇರಿದಂತೆ ಮುಂತಾದ ಗ್ರಾಮಗಳಿಂದ ನಗರಕ್ಕೆ ವಿದ್ಯಾಭ್ಯಾಸ, ಕೂಲಿ ಕೆಲಸಕ್ಕೆ ಬರುವ ಹಲವಾರು ಜನರಿಗೆ ಬಸ್‌ಗಳ ಸೌಲಭ್ಯವಿಲ್ಲದೆ ಸಮಸ್ಯೆ ಉಂಟಾಗುತ್ತಿದೆ. ಈ ಮೊದಲು ಒಂದೆರಡು ಬಸ್‌ಗಳ ಓಡಾಡವಿತ್ತು, ಆದರೆ ಇತ್ತೀಚೆಗೆ ಅವುಗಳನ್ನು ನಿಲ್ಲಿಸಿರುವುದರಿಂದ ಪ್ರಯಾಣಿಕರಿಗೆ ಸಮಸ್ಯೆ ಉಂಟಾಗಿದೆ ಕೂಡಲೇ ಸಂಬಂಧಪಟ್ಟ ಅಧಿಕಾರಿಗಳು ಗನಹರಿಸಬೇಕು, ರೈತರ



ಜಮೀನುಗಳಿಗೆಹೋಗುವಬಡಿದಾರಿ,ಕಾಲುದಾರಿ, ನಕಾಶೆದಾರಿಗಳನ್ನು ಬಿಡಿಸಿಕೊಡಬೇಕು, ನಾಯಕನಹಟ್ಟಿ ಹೋಬಳಿ ವ್ಯಾಪ್ತಿಯ ಹಲವಾರು ಗ್ರಾಮಗಳಲ್ಲಿ ಹಗಲುವೇಳೆಯಲ್ಲಿ ಬೀದಿದೀಪಗಳು ಉರಿಯುತ್ತಿದ್ದು ಅವುಗಳ ಆರಿಸುವಂತೆ ಹಲವಾರು ಮನವಿ ಮಾಡಿದ್ದರೂ ಬೆಸ್ಕಾಂ, ಪಂಚಾಯಿತಿ ಅಧಿಕಾರಿಗಳು ನಿರ್ಲಕ್ಷ್ಯೆ ತೋರುತ್ತಿದ್ದಾರೆ ಕೂಡಲೇ ಕ್ರಮವಹಿಸಬೇಕು, ಗ್ರಾಮಗಳ ರಸ್ತೆಗಳಲ್ಲಿ ಬಿದ್ದ ಗುಂಡಿಗಳನ್ನು ಮುಚ್ಚಬೇಕು, ಕಳೆದ ಎರಡು ದಿನಗಳ ಹಿಂದೆ ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಉಗ್ರರ ದಾಳಿಯನ್ನು ಖಂಡಿಸಿ, ಕೇಂದ್ರ ಸರ್ಕಾರ ತಕ್ಕ ಉತ್ತರ ನೀಡಬೇಕೆಂದು ಆಗ್ರಹಿಸಿದರು.

ಮನವಿ ಸ್ವೀಕರಿಸಿದ ಶಿರಸ್ತೇದಾರ್ ಗಿರೀಶ್, ನಿಮ್ಮೆಲ್ಲಾ ಬೇಡಿಕೆಗಳ ಮುಂದಿನ ಕ್ರಮಕ್ಕಾಗಿ ಜಿಲ್ಲಾಧಿಕಾರಿಗಳಿಗೆ ಕಳಿಸುವ ಭರವಸೆ ನೀಡಿದರು. ಸಂಘದ ಗೌರವಾಧ್ಯಕ್ಷ ಚಂದ್ರಶೇಖರ್‌ನಾಯ್ಕ, ತಾಲ್ಲೂಕು ಅಧ್ಯಕ್ಷ ಮಲಸಮುದ್ರಎಂ.ಗಂಗಾಧರ, ಪ್ರಧಾನ ಕಾರ್ಯದರ್ಶಿ ರಂಗಾರೆಡ್ಡಿ, ರಾಜಣ್ಣ, ವೆಂಕಟೇಶ್‌ರೆಡ್ಡಿ, ಸಣ್ಣತಿಪ್ಪೇಸ್ವಾಮಿ, ನಾಗೇಶ್, ಮಂಜಣ್ಣ, ಶ್ರೀನಿವಾಸ್, ತಿಪ್ಪೇಸ್ವಾಮಿ, ಸತೀಶ್‌ರೆಡ್ಡಿ, ಪ್ರಶಾಂತ್‌ರೆಡ್ಡಿ, ಚಿತ್ತಯ್ಯ ಪಾಲ್ಗೊಂಡಿದ್ದರು.

## ಪಹಲ್ಗಾಮ್ ದಾಳಿ: ಕೇಂದ್ರ ಸರ್ಕಾರದ ನಿರ್ಣಯಕ್ಕೆ ನಮ್ಮ ಬೆಂಬಲ; ಸಚಿವ

» **ಚಿತ್ರದುರ್ಗ**



ಪಹಲ್ಗಾಮ್‌ನಲ್ಲಿ ಹಿಂದೂಗಳ ಮೇಲೆ ಉಗ್ರರ ಅಟ್ಟಹಾಸ ಪ್ರಕರಣವನ್ನು ಉಗ್ರವಾಗಿ ಖಂಡಿಸಿದ್ದು, ಇದರ ಬಗ್ಗೆ ರಾಷ್ಟ್ರಾದ್ಯಂತ ಸರ್ವ ಪಕ್ಷಗಳು ಸೇರಿ ಪಕ್ಷಾತೀತವಾಗಿ ಸರ್ಕಾರಕ್ಕೆ ಬೆಂಬಲ ನೀಡಿದ್ದು,ಕೇಂದ್ರಯಾವುದೇನಿರ್ಣಯವನ್ನು ತೆಗೆದುಕೊಳ್ಳಿ ಅದಕ್ಕೆ ನಮ್ಮ ಬೆಂಬಲ ಎಂದು ಯೋಜನೆ& ಸಾಂಖ್ಯಿಕ ಸಚಿವ ಡಿ.ಸುಧಾಕರ್ ಹೇಳಿದ್ದಾರೆ.ಚಿತ್ರದುರ್ಗದಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಯಾರು ಕೃತ್ಯ ಎಸಗಿದ್ದಾರೆ ಅವರನ್ನು ಸೆದೆ ಬಡಿಯುವ ಕೆಲಸ ಸರ್ಕಾರ ಮಾಡಬೇಕು ಪ್ರಧಾನಿ ಮೋದಿ ಅವರ ಜೊತೆ ನಮ್ಮ ಸರ್ಕಾರ ಜೊತೆಗಿರಲಿದೆ ಇದರ ಬಗ್ಗೆ ಸಿಎಂ, ಡಿಸಿಎಂ ಕೂಡ ಈಗಾಗಲೇ ಹೇಳಿದ್ದಾರೆ ಈ ರೀತಿಯ ಘಟನೆ ಆಗಲೇಬಾರದು ಕೋಮುವಾದ ಬಿತ್ತುವಂತಹ ಘಟನೆ ಆಗಬಾರದು ಇಲ್ಲಿ ರಾಜಕೀಯ ಮಾಡುವುದು ಅನವಶ್ಯಕ ಎಂದು ಸಿಎಂ, ಡಿಸಿಎಂ ಹೇಳಿದ್ದಾರೆ ಯಾರೂ ಕೂಡ ಇದ್ರಲ್ಲಿ ರಾಜಕೀಯ ಬೆರೆಸುವ ಕೆಲಸ ಮಾಡಬಾರದು ಎಂದರು ತಿಳಿಸಿದರು.ರಾಷ್ಟ್ರದ ಏಕತೆ, ಸಮಗ್ರತೆಗೆ ಎಲ್ಲರೂ ಬದ್ದರಾಗಿ ಇರಬೇಕು ರಾಬರ್ಟ್ ವಾದ್ರಾ ಹೇಳಿಕೆ ವಿಚಾರಕ್ಕೆ ನಾನು ರಿಯಾಕ್ಟ್ ಮಾಡಲ್ಲ ಎಂದ ಸಚಿವರು, ದೇಶ ಶಾಂತಿಯಿಂದ ಅಹಿಂಸಾ ಮಾರ್ಗದಲ್ಲಿ ಹೋಗಬೇಕು ರಾಜತಾಂತ್ರಿಕವಾಗಿ ಪ್ರಧಾನಿಗಳು ಈಗಾಗಲೇ ದಿಟ್ಟ ನಿಲುವನ್ನು ತೆಗೆದುಕೊಂಡಿದ್ದಾರೆ ಯಾವುದೇ ಕಾರಣಕ್ಕೂ ಉಗ್ರವಾದವನ್ನು ಸಹಿಸಲ್ಲ ಎಂದು ಭಾರತ ದೇಶ ರವಾನಿಸಿದೆ ಇದಕ್ಕೆ ನಮ್ಮ ಸರ್ಕಾರದ ಹಾದಿಯಾಗಿ ನಾವೆಲ್ಲರೂ ಬದ್ದರಿದ್ದೀವಿ– ಸಚಿವ ಸುಧಾಕರ್ ತಿಳಿಸಿದರು.

**ಪ್ರಮುಖ ಸುದ್ದಿ**

**ಕನ್ನಡ ಕರಡು ತಿದ್ದುಪಡಿ ಕಮ್ಮಟದಲ್ಲಿ ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಅಭಿಮತ**

# ಕನ್ನಡ ಭಾಷೆ ಸೌಂದರ್ಯಕ್ಕೆ ತಪ್ಪಿಲ್ಲದ ಭಾಷೆ ಪ್ರಯೋಗ ಅವಶ್ಯಕ

» **ಚಿತ್ರದುರ್ಗ**

ಕನ್ನಡಭಾಷೆಅತ್ಯಂತಪುರಾತನವಾದದ್ದು,ಈ ಭಾಷೆಯ ಸೌಂದರ್ಯ ಕಾಪಾಡಬೇಕಾದರೆ ತಪ್ಪಿಲ್ಲದ ಭಾಷೆ ಪ್ರಯೋಗ ಅತ್ಯಂತ ಅವಶ್ಯಕ ಎಂದು ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಹೇಳಿದರು.

ವಿಶ್ವ ಪುಸ್ತಕ ದಿನಾಚರಣೆ ಅಂಗವಾಗಿ ಕನ್ನಡ ಪುಸ್ತಕ ಪ್ರಾಧಿಕಾರ ಹಾಗೂ ಸಿರಿಗೆರೆ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠ ಸಹಯೋಗದಲ್ಲಿ ಸಿರಿಗೆರೆಯ ಶ್ರೀ ಗುರುಶಾಂತೇಶ್ವರ ದಾಸೋಹ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ “ಕನ್ನಡ ಕರಡು ತಿದ್ದುಪಡಿ ಕಮ್ಮಟ” ಉದ್ಘಾಟಿಸಿ ಅವರು ಮಾತನಾಡಿದರು.

ಭಾಷಾ ಬಳಕೆಗೆ ಲಿಪಿಯು ಒಂದು ಉತ್ತಮ ಸಲಕರಣೆ. ಈ ಸಲಕರಣೆಯನ್ನು ಸೂಕ್ತವಾಗಿ ಹಾಗೂ ಅತ್ಯಂತ ಸಮರ್ಪಕವಾಗಿ ಬಳಸುವ ಅವಶ್ಯವಿದೆ. ಆ ನಿಟ್ಟಿನಲ್ಲಿ ಕನ್ನಡ ಪುಸ್ತಕ ಪ್ರಾಧಿಕಾರ ಆಯೋಜಿಸಿರುವ ಇಂತಹ ಕನ್ನಡ ಕರಡು ತಿದ್ದುಪಡಿ ಕಮ್ಮಟವು ಪ್ರಾಧ್ಯಾಪಕರಿಗೆ ಹಾಗೂ ಕನ್ನಡ ಕಲಿಯುವ ಮಕ್ಕಳಿಗೆ ಅತ್ಯಂತ ಉಪಯುಕ್ತವಾಗಲಿದೆ ಎಂದು ಹೇಳಿದರು.

ಪುರಾತನ ಕಾಲದಿಂದ ಸಾವಿರಾರು ಭಾಷೆಗಳು ಚಿತ್ರಗಳ ಮೂಲಕ ಲಿಪಿಯನ್ನು



ಆರಂಭಿಸಿ ಹಂತ ಹಂತವಾಗಿ ಅವು ಬೆಳೆದು ಅಕ್ಷರ ರೂಪ ತಾಳಿವೆ. ಈ ಅಕ್ಷರ ರೂಪ ತಪ್ಪುಗಳಿಲ್ಲದೆ ಬಳಕೆಯಾದಾಗ ಆ ಭಾಷೆಯ ಸೌಂದರ್ಯ ವೃದ್ಧಿಯಾಗುತ್ತದೆ ಎಂದು ಅವರು ಕಿವಿ ಮಾತು ಹೇಳಿದ ಅವರು, ಪುರಾತನ ಲಿಪಿಗಳಲ್ಲಿ ಕನ್ನಡವೂ ಒಂದು. ಇದನ್ನು ಜಗತ್ತಿನ ಭಾಷೆಗಳ ರಾಣಿ ಎಂದು ವಿನೋಬಾ ಭಾವೆಯವರು ಹೇಳಿದ್ದಾರೆ ಎಂಬುದನ್ನು ಅವರು ಸ್ಮರಿಸಿದರು.

ಕಮ್ಮಟದ ನಿರ್ದೇಶಕ ಕೆ.ರಾಜಕುಮಾರ್ ಮಾತನಾಡಿ, ಕನ್ನಡ ಭಾಷಾ ಬಳಕೆ ಬಗ್ಗೆ ಅತ್ಯಂತ ಎಚ್ಚರವಾಗಿರಬೇಕು. ಬಹಳಷ್ಟು ಜನರು ಕನ್ನಡವನ್ನು ತಪ್ಪು ತಪ್ಪಾಗಿ ಬಳಸುತ್ತಾರೆ. ಲೇಖನ ಚಿಹ್ನೆಗಳ ಬಗ್ಗೆ ಬಹಳಷ್ಟು ಜನರಿಗೆ ತಿಳುವಳಿಕೆ ಕಡಿಮೆ. ಇವುಗಳನ್ನು ತಿಳಿಸಿ ಕೊಡುವುದೇ ಈ ಕಮ್ಮಟದ ಉದ್ದೇಶವಾಗಿದೆ ಎಂದರು.

ಡಿಟಿಪಿ ಮಾಡುವವರು ಹಾಗೂ ಲೇಖಕರು ತಮ್ಮ ಹಸ್ತಪ್ರತಿಗಳನ್ನು ತಿದ್ದುವಾಗ ಅತ್ಯಂತ ಎಚ್ಚರಿಕೆಯಿಂದ ಈ ಲೇಖನ ಚಿಹ್ನೆಗಳನ್ನು ತಿದ್ದುಪಡಿ ಮಾಡುವ ವಿಧಾನವನ್ನು ಸಮರ್ಥವಾಗಿ ಕಲಿತಿರಬೇಕು ಎಂದು ಅವರು ಹೇಳಿದರು.

ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ. ಮಾನಸ ಮಾತನಾಡಿ, ಮನೆಯ ಕತ್ತಲೆ ಓಡಿಸಲು ಮನೆಗೊಂದು ಕಿಟಕಿ ಇರಬೇಕು. ಮನದ ಕತ್ತಲೆ ತೊಳೆಯಲು ಪ್ರತಿ ಮನಸ್ಸಿಗೂ ಒಂದು ಪುಸ್ತಕವಿರಬೇಕು ಎಂದರು.

ಪುಸ್ತಕಗಳು ಮನುಷ್ಯನಿಗೆ ಬದುಕು ಕಲಿಸುತ್ತದೆ. ಬದುಕು ಎಂದರೆ ಬರೀ ಬದುಕುವುದಲ್ಲ. ಬದುಕಿಗೊಂದು ಅರ್ಥ ಬರಬೇಕಾದರೆ ಅಧ್ಯಯನ ಬಹಳ ಮುಖ್ಯ. ಹಾಗಾಗಿ ಪುಸ್ತಕಗಳು ಪ್ರತಿಯೊಬ್ಬರ ಜೀವನದಲ್ಲಿ ಅತ್ಯಂತ ಮಹತ್ವದ ಪಾತ್ರವಹಿಸುತ್ತದೆ. ನಾವು ಓದುವ ಅಭಿರುಚಿಯನ್ನು ಬೆಳೆಸಬೇಕು. ಪುಸ್ತಕ ಪ್ರೀತಿಯನ್ನು ಬೆಳೆಸಬೇಕು ಎಂದು ಹೇಳಿದರು.

ಪುಸ್ತಕ ಪ್ರಾಧಿಕಾರದ ಯೋಜನೆಗಳ ಬಗ್ಗೆ ವಿವರಿಸಿದ ಮಾನಸ ಅವರು, ಇಂತಹ ಕಮ್ಮಟಗಳು ಸಮರ್ಥ ಭಾಷಾ ಬಳಕೆಗೆ ಅತ್ಯಂತ ಉಪಯುಕ್ತ ಎಂದು ಹೇಳಿದರು.

ಸಮಾರಂಭದಲ್ಲಿ ಶ್ರೀ ತರಳಬಾಳು ಜಗದ್ಗುರು ಬೃಹನ್ಮಠದ ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳನ್ನು ಪುಸ್ತಕ ಪ್ರಾಧಿಕಾರದ ವತಿಯಿಂದ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಾಹಿತಿ ಚಿಕ್ಕಣ್ಣ ಯಣ್ಣೆಕಟ್ಟೆ, ಸಿರಿಗೆರೆ ಬೃಹನ್ಮಠದ ವಿದ್ಯಾಸಂಸ್ಥೆಗಳ ಆಡಳಿತಾಧಿಕಾರಿ ಡಾ. ಎಚ್.ವಿ.ವಾಮದೇವಪ್ಪ, ವಿಶೇಷಾಧಿಕಾರಿ ವೀರಣ್ಣ ಬಿ ಜತ್ತಿ, ಕನ್ನಡ ಪುಸ್ತಕ ಪ್ರಾಧಿಕಾರದ ಆಡಳಿತಾಧಿಕಾರಿ ಕೆ.ಬಿ.ಕಿರಣ್ ಸಿಂಗ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಚಿತ್ರದುರ್ಗದ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ್ ಇದ್ದರು.

## ಫಾಸ್ಟ್ ನ್ಯೂಸ್

### ಬಿವಿಎ ಪ್ರವೇಶಾತಿಗೆ ಅರ್ಜಿ

» **ಚಿತ್ರದುರ್ಗ**

ಮೈಸೂರು ವಿಶ್ವವಿದ್ಯಾನಿಲಯಕ್ಕೆ ಸಂಯೋಜನೆಗೊಂಡಿರುವ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಸಿದ್ಧಾರ್ಥನಗರ, ಮೈಸೂರು ಸಂಸ್ಥೆಯಲ್ಲಿ ಬ್ಯಾಚುಲರ್ ಆಫ್ ವಿಜುಯಲ್ ಆರ್ಟ್ಸ್ (ಬಿ.ವಿ.ಎ) (ನಾಲ್ಕು ವರ್ಷದ ಎಂಟು ಸೆಮಿಸ್ಟರ್ ಎನ್.ಇ.ಪಿ. ಪದ್ಧತಿ] ದೃಶ್ಯಕಲೆಯಲ್ಲಿ 2025–26ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಬಿ.ವಿ.ಎ ಪದವಿ ಪ್ರವೇಶಾತಿಗಾಗಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಪದವಿಯಲ್ಲಿ 3ನೇ ಸೆಮಿಸ್ಟರ್‌ನಿಂದ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ ಕಲೆ (ಅಚ್ಚುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಚಿತ್ರ ಪತ್ರಿಕೋದ್ಯಮ ವಿಭಾಗಗಳಲ್ಲಿ ವಿಶೇಷ ಅಧ್ಯಯನದ ಸ್ನಾತಕ ಪದವಿಯಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸರ್ಕಾರದ ಅಂತರ್ಜಾಲ ವಿಳಾಸ https://uucms.karnataka.gov.in CxÀªÁ https://www.cavamysore karnataka.gov.in ಅಂತರ್ಜಾಲದ ಮೂಲಕವೇ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಪ್ರವೇಶಾತಿಗಾಗಿ ಅರ್ಹತಾ ಪರೀಕ್ಷೆಯ ದಿನಾಂಕ ಮತ್ತು ಇತರೆ ಮಾಹಿತಿಯನ್ನು ಪ್ರತ್ಯೇಕವಾಗಿ ತಿಳಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಈ ಕಾರ್ಯಾಲಯದ ಸಹಾಯವಾಣಿಗೆ ಕಛೇರಿ ಸಮಯದಲ್ಲಿ 0821–2438931 ಯನ್ನು ಸಂಪರ್ಕಿಸಬಹುದು ಎಂದು ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪ್ಯಾನಲ್ ವಕೀಲರ ಆಯ್ಕೆಗಾಗಿ ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸಲು ಪ್ಯಾನಲ್ ವಕೀಲರ ಆಯ್ಕೆಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಮೇ 07 ಅರ್ಜಿ ಸಲ್ಲಿಸಲು ಕೊನೆಯ ದಿನ. ಆಸಕ್ತರು ತಮ್ಮ ವೈಯಕ್ತಿಕ ವಿವರಗಳೊಂದಿಗೆ ಸ್ವ ಹಸ್ತಾಕ್ಷರದಿಂದ ಭರ್ತಿ ಮಾಡಿದ ಅರ್ಜಿಯನ್ನು ಸದಸ್ಯ ಕಾರ್ಯದರ್ಶಿಗಳು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಚಿತ್ರದುರ್ಗ ಅವರಿಗೆ ಸಲ್ಲಿಸಬಹುದಾಗಿರುತ್ತದೆ. ಅವಧಿ ಮುಗಿದ ನಂತರ ಬಂದ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಚಿತ್ರದುರ್ಗ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ಯಾನಲ್ ವಕೀಲರ ಅವಧಿಯು ಮುಕ್ತಾಯಗೊಳ್ಳುತ್ತಿದ್ದು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಹಾಗೂ ಮಾನ್ಯ ಕಾರ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ 03 ವರ್ಷಕ್ಕಿಂತ ಮೇಲ್ಪಟ್ಟು ವಕೀಲರ ವೃತ್ತಿಯಲ್ಲಿ ಅನುಭವ ಇರುವ ವಕೀಲರನ್ನು ಚಿತ್ರದುರ್ಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದಲ್ಲಿ ಕಾನೂನು ನೆರವು ನೀಡುವ ಪ್ರಕರಣಗಳಲ್ಲಿ ಹಾಜರಾಗಲು ಹಾಗೂ ಫ್ರಂಟ್ ಆಫೀಸ್ (ನ್ಯಾಯಾಲಯದ ಆವರಣ), ತಹಸೀಲ್ದಾರ್ ಕಛೇರಿ, ಸಿ.ಡಿ.ಪಿ ಕಛೇರಿ, ಕಾರಾಗೃಹ, ಬಾಲ ನ್ಯಾಯಮಂಡಳಿ, ಗ್ರಾಮೀಣ ಕಾನೂನು ನೆರವು ಮತ್ತು ಸಲಹಾ ಕೇಂದ್ರ, ಎ.ಆರ್.ಟಿ ಕೇಂದ್ರಗಳಲ್ಲಿನ ಕಾನೂನು ಸಲಹಾ ಕೇಂದ್ರಗಳಿಗೆ, "ಸಖಿ" ಕೇಂದ್ರಗಳಲ್ಲಿ ಕಾನೂನು ಸಲಹೆ ನೀಡಲು ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಅನುಕೂಲವಾಗುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳಲ್ಲಿ ಕಾರ್ಯ ನಿರ್ವಹಿಸಲು ಪ್ಯಾನಲ್ ವಕೀಲರುಗಳ ಆಯ್ಕೆ ಅವಶ್ಯಕವಾಗಿರುತ್ತದೆ. ಪ್ಯಾನಲ್ ವಕೀಲರ ಆಯ್ಕೆ ಪ್ರಕ್ರಿಯೆಯು THE NATIONAL LEGAL SERVICES AUTHORITY (FREE AND COMPETENT LEGAL SERVICES) REGULATIONS, 2010 (As amended vide notification F.No. L/61/10/NALSA dated 28.08.2019 published in the Gazette of India on 06.09.2019) ರ ರೆಗ್ಯೂಲೇಷನ್ 8(2) ಮತ್ತು 10 (4) ಗೆ ಒಳಪಟ್ಟಿರುತ್ತದೆ ಮತ್ತು ಮೌಖಿಕ ಸಂದರ್ಶನದ ಮುಖಾಂತರ ಪ್ಯಾನಲ್ ವಕೀಲರನ್ನು ಆಯ್ಕೆ ಮಾಡಲಾಗುವುದು.ಆದ್ದರಿಂದ ಚಿತ್ರದುರ್ಗ ಜಿಲ್ಲೆಯ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಲ್ಲಿ ಪ್ಯಾನಲ್ ವಕೀಲರಾಗಿ ಕಾರ್ಯನಿರ್ವಹಿಸಲು ಇಚ್ಚಿಸುವ ಅರ್ಹ ಅಭ್ಯರ್ಥಿಗಳು ನಿಗಧಿತ ಅರ್ಜಿ ನಮೂನೆಯಲ್ಲಿ ದಿನಾಂಕ 07/05/2025 ರಂದು ಸಂಜೆ 5.00 ಗಂಟೆಯೊಳಗಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಚಿತ್ರದುರ್ಗಲ್ಲಿ ಸಲ್ಲಿಸಲು ಕೋರಲಾಗಿದೆ. ಅಭ್ಯರ್ಥಿಗಳ ಆಯ್ಕೆ ಈ ಕೆಳಗಿನ ನಿಬಂಧನೆಗಳಿಗೆ ಒಳಗೊಂಡಂತೆ ಅರ್ಜಿಯನ್ನು ಕರೆಯಲಾಗಿದೆ.

**ನಿಬಂಧನೆಗಳು:** ವಕೀಲ ವೃತ್ತಿಯಲ್ಲಿ ಕನಿಷ್ಠ 3 ವರ್ಷಗಳ ಅನುಭವವಿರಬೇಕು. ಕರ್ನಾಟಕ ಬಾರ್ ಕೌನ್ಸಿಲ್ ನಿಂದ ನೊಂದಾವಣೆ ಆಗಿರಬೇಕು ಹಾಗೂ ಅದರ ಪ್ರಮಾಣಪತ್ರವನ್ನು ಲಗತ್ತಿಸಬೇಕು. ಕಾನೂನು ಸೇವೆಗಳ ಪ್ರಾಧಿಕಾರದ ನಿಯಮಗಳನ್ನು ತಿಳಿದಿರಬೇಕು. ವಕೀಲರುಗಳಿಗೆ ಪ್ರತ್ಯೇಕವಾದ ವಾಹನ ಭತ್ಯೆ ನೀಡಲಾಗುವುದಿಲ್ಲ. ಬೈಠಕ್ ಭತ್ಯೆ ಮಾತ್ರ ನೀಡಲಾಗುತ್ತದೆ. ವಕೀಲರ ಸಾಮರ್ಥ್ಯ, ಸಮಗ್ರತೆ, ಸೂಕ್ತತೆ ಮತ್ತು ಅನುಭವಗಳನ್ನು ಪರಿಗಣಿಸಲಾಗುತ್ತದೆ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ತಿಳಿಸಿದ್ದಾರೆ.

### ಕೃಷಿಕ ಸಮಾಜದ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಕೃಷಿಕ ಸಮಾಜದ ಸಭೆಯನ್ನು ಇದೇ ಏಪ್ರಿಲ್ 28ರಂದು ಬೆಳಿಗ್ಗೆ 11ಕ್ಕೆ ಚಿತ್ರದುರ್ಗ ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿಯ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

# ಮಲೇರಿಯಾ ನಿರ್ಮೂಲನೆ ಎಲ್ಲರ ಜವಾಬ್ದಾರಿ

» **ಚಿತ್ರದುರ್ಗ**

ಮಲೇರಿಯಾ ನಿರ್ಮೂಲನೆ ಎಲ್ಲರ ಜವಾಬ್ದಾರಿಯಾಗಿರಲಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.

ಇಲ್ಲಿನ ಬುದ್ಧನಗರದ ನಗರ ಆರೋಗ್ಯಕೇಂದ್ರದಮುಂಭಾಗಲ್ಲಿಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಆರೋಗ್ಯ ಇಲಾಖೆ ಸಹಯೋಗದೊಂದಿಗೆ ವಿಶ್ವ ಮಲೇರಿಯಾ ದಿನದ ಪ್ರಯುಕ್ತ ಜನ ಜಾಗೃತಿ ಜಾಥಾಕ್ಕೆ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.




ಕೀಟಗಳಿಂದ ಹರಡುವ ರೋಗಗಳಲ್ಲಿ ಮಲೇರಿಯಾ ರೋಗವು ಒಂದಾಗಿದೆ. ಈ ಹಿಂದೆ ಮಲೇರಿಯಾ ರೋಗ ಒಂದು ಸಾರ್ವಜನಿಕ ಆರೋಗ್ಯ ಸಮಸ್ಯೆಯಾಗಿತ್ತು. ಈಗ ಮಲೇರಿಯಾ ನಿರ್ಮೂಲನೆ ಹಂತಕ್ಕೆ ತಲುಪಿದೆ. ಸಾರ್ವಜನಿಕರ ಸಹಕಾರದೊಂದಿಗೆ ಮಲೇರಿಯಾ ಮುಕ್ತ ಜಿಲ್ಲೆಯಾಗಿಸೋಣ ಎಂದು ಹೇಳಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಪ್ರತಿ ವರ್ಷದಂತೆ ಈ ವರ್ಷವೂ ಸಹ ಏಪ್ರಿಲ್ 25ರಂದು ವಿಶ್ವ ಮಲೇರಿಯಾ ದಿನ ಆಚರಿಸುತ್ತಿದ್ದು, ಈ ವರ್ಷದ ಧ್ಯೇಯವಾಕ್ಯ "ಮಲೇರಿಯಾ ನಮ್ಮೊಂದಿಗೆ ಕೊನೆಗೊಳ್ಳುತ್ತದೆ. ಮರು ಹೂಡಿಕೆ ಮಾಡಿ. ಮರು ಕಲ್ಪನೆ ಮಾಡಿ. ಮರು ಉತ್ತೇಜನ ನೀಡೋಣ "ಖಿಜಟಜ: ಟಚಿಟಚಿಡುಚಿ ಜಟಿಧ ತಿಣು ಣ: ಡಿಜುಟಿತಿಭಣ ಡಿಜುಟಚಿರುಟಿಜ ಡಿಜುರಟಿಣಜ" 2027 ರ ವೇಳೆಗೆ ಕರ್ನಾಟಕ ರಾಜ್ಯವನ್ನು ಮಲೇರಿಯಾ ಮುಕ್ತಗೊಳಿಸಿ ಗುರಿಯನ್ನು ಸಾಧಿಸ ಬೇಕಾಗಿರುವುದರಿಂದ ಎಲ್ಲಾ ಹಂತಗಳಲ್ಲಿಯೂ ಮಲೇರಿಯಾ ಚಟುವಟಿಕೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು.

ರಾಜ್ಯ ಹಾಗೂ ಕೇಂದ್ರದ ಮಾರ್ಗಸೂಚಿಯಂತೆ 2027ರೊಳಗೆ ಕರ್ನಾಟಕದಲ್ಲಿ ಮಲೇರಿಯಾ ನಿವಾರಣಾ ಗುರಿಯೊಂದಿಗೆ ಇಲಾಖೆ ಕಾರ್ಯೋನ್ಮುಖವಾಗಿದೆ. ಶೀಘ್ರ ಪತ್ತೆ ಸಂಪೂರ್ಣ ಚಿಕಿತ್ಸೆ, ಸೊಳ್ಳೆ ನಿಯಂತ್ರಣ ಕ್ರಮಗಳು, ಜೈವಿಕ ಪರಿಸರ ನಿಯಂತ್ರಣಾ ಕ್ರಮಗಳನ್ನು ಇಲಾಖೆ ನಿರ್ವಹಿಸುತ್ತಿದೆ. ಆರೋಗ್ಯ ಶಿಕ್ಷಣ ಕಾರ್ಯಕ್ರಮ ಹೆಚ್ಚು ಹೆಚ್ಚು ನಿರ್ವಹಿಸಿ ಮಲೇರಿಯಾ ನಿರ್ಮೂಲನಾ ಕಾರ್ಯ ನಡೆಯುತ್ತಿದೆ ಎಂದರು.

ಜಿಲ್ಲಾ ಕೀಟಜನ್ಯ ರೋಗಗಳ ನಿವಾರಣಾಧಿಕಾರಿ ಡಾ.ಕಾಶಿ ಮಾತನಾಡಿ, 2023 ರಿಂದ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಯಾವುದೇ ಮಲೇರಿಯಾ ಪ್ರಕರಣ ವರದಿಯಾಗಿರುವುದಿಲ್ಲ ಎಂದರು.

ಚಿತ್ರದುರ್ಗ ನಗರದ ಬುದ್ಧ ನಗರದಿಂದ ಪ್ರಾರಂಭವಾಗುವ ಜನ ಜಾಗೃತಿ ಜಾಥಾವು ಶುದ್ಧ ಕುಡಿಯುವ ನೀರಿನ ರಸ್ತೆ ಪ್ರಶಾಂತ ನಗರ, ಶಾಸಕರಾದ ಚಂದ್ರಪ್ಪ ಮನೆ ಹತ್ತಿರದ ಮಾರ್ಗವಾಗಿ ಪರಿಸರ ಕಟ್ಟಡದಿಂದ ಆರೋಗ್ಯ ಕೇಂದ್ರ ಬುದ್ಧ ನಗರದವರೆಗೆ ಜನ ಜಾಗೃತಿ ಜಾಥಾ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸಿ.ಒ.ಸುಧಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್, ವೈದ್ಯಾಧಿಕಾರಿಗಳಾದ ಡಾ.ಸುರೇಂದ್ರ, ಡಾ.ಬಿಲಾಲ್, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎನ್.ಎಸ್.ಮಂಜುನಾಥ, ಬಿ.ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಸುರೇಶ್ ಬಾಬು, ಶ್ರೀನಿವಾಸ, ನಾಗರಾಜ್, ಮಳಲಿ ಶ್ರೀನಿವಾಸ, ಮಲ್ಲಿಕಾರ್ಜುನ, ಗುರುಮೂರ್ತಿ, ತಾಲ್ಲೂಕು ಆಶಾ ಬೋಧಕಿ ತಬಿತಾ, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ಆಶಾ ಕಾರ್ಯಕರ್ತೆಯರು, ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಇದ್ದರು.

#### ವಿಶ್ವ ಲಸಿಕಾ ಸಪ್ತಾಹ ಕಾರ್ಯಕ್ರಮದಲ್ಲಿ ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್

## ಜೀವ ರಕ್ಷಕಗಳಾಗಿ ಲಸಿಕೆಗಳು ಕಾರ್ಯ ನಿರ್ವಹಣೆ

» **ಚಿತ್ರದುರ್ಗ**

ನಿಮ್ಮ ಮಕ್ಕಳಿಗೆ 2 ವರ್ಷ ತುಂಬುವ ಮುನ್ನ 12 ಮಾರಕ ರೋಗಗಳನ್ನು ನಿಯಂತ್ರಿಸುವ ಲಸಿಕೆಗಳನ್ನು ಕಾಲ ಕಾಲಕ್ಕೆ ತಪ್ಪದೇ ಕೊಡಿಸಿ. ಲಸಿಕೆಗಳು ಜೀವ ರಕ್ಷಕಗಳಾಗಿ ಕಾರ್ಯ ನಿರ್ವಹಿಸಿತ್ತವೆ ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಹೇಳಿದರು.

ಇಲ್ಲಿನ ನೆಹರು ನಗರದ ನಗರ ಆರೋಗ್ಯ ಕೇಂದ್ರ ವ್ಯಾಪ್ತಿಯ ಚೇಳುಗುಡ್ಡದ ಮಾರಮ್ಮ ದೇವಸ್ಥಾನದ ಆವರಣದಲ್ಲಿ ವಿಶ್ವ ಲಸಿಕಾ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.



ವಿಶ್ವ ಲಸಿಕಾ ಸಪ್ತಾಹ ಪ್ರತಿ ವರ್ಷ ಏಪ್ರಿಲ್ 24 ರಿಂದ 30 ರವರೆಗೆ ನಡೆಸುವ ವಿಶೇಷ ಲಸಿಕಾ ಅಭಿಯಾನವಾಗಿರುತ್ತದೆ. ಪ್ರತಿ ಮತ್ತು ಮಂಗಳವಾರ ದೈನಂದಿನ ಲಸಿಕಾ ಕಾರ್ಯಕ್ರಮ ಜರುಗುತ್ತಿದ್ದರೂ ಸಹ ವಿಶೇಷ ಲಸಿಕಾ ಸಪ್ತಾಹ ಕಾರ್ಯಕ್ರಮ ಲಸಿಕೆ ಪಡೆಯದೆ ಬಿಟ್ಟು ಹೋದ ಮಕ್ಕಳಿಗೆ ಸಾರಿಗೆ ವ್ಯವಸ್ಥೆ ಇಲ್ಲದ ಮತ್ತು ತಲುಪಲು ದುಸ್ತರವಾದ ಪ್ರದೇಶ ನಗರ ಕೊಳಚೆ ಪ್ರದೇಶಗಳನ್ನು, ಆರೋಗ್ಯ ಸೇವೆ ಒದಗಿಸುವ ಸಿಬ್ಬಂದಿ ಕೊರತೆ ಇರುವ ಪ್ರದೇಶಗಳು ಎಂದು ಗುರುತಿಸಿ, ಸೇವಾ ವಂಚಿತ ಪ್ರದೇಶದಲ್ಲಿ ವಿಶೇಷ ಲಸಿಕಾ ಅಭಿಯಾನ ನಡೆಸಲಾಗುತ್ತದೆ ಎಂದು ಹೇಳಿದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಪೂರ್ವ ನಿಯೋಜಿತವಾಗಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಲಸಿಕಾ ಕ್ರಿಯಾ ಯೋಜನೆ ತರಿಸಿ, ಯೋಜನೆಯಂತೆ ಲಸಿಕಾ ಸತ್ರಗಳನ್ನು ನಡೆಸಲಾಗುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಲಸಿಕೆ ಬಿಟ್ಟುಹೋದ 8 ಮಕ್ಕಳಿಗೆ ವಿವಿಧ ಹಂತದ ಲಸಿಕೆ ನೀಡಲಾಯಿತು ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿ ಡಾ.ಸೈಯದ್ ಬಿಲಾಲ್, ಆರೋಗ್ಯ ಶಿಕ್ಷಣಾಧಿಕಾರಿಗಳಾದ ಎನ್.ಎಸ್.ಮಂಜುನಾಥ, ಬಿ.ಮೂಗಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪ್ರವೀಣ್, ಗುರುಮೂರ್ತಿ, ಗೋಪಾಲ ಕೃಷ್ಣ, ಹನುಮಂತಪ್ಪ, ನಿತಿನ್, ತಾಲ್ಲೂಕು ಆಶಾ ಭೋದಕಿ ತಬಿತಾ, ಆಶಾ ಕಾರ್ಯಕರ್ತೆಯರಾದ ಅಭಿನಯ, ಸಂಗೀತ ಹಾಗೂ ತಾಯಿ ಮಕ್ಕಳು ಇದ್ದರು.

## ಈಜಲು ಬಾವಿಗೆ ಇಳಿದ ಯುವಕನಿಗಾಗಿ ಅಗ್ನಿಶಾಮಕ ಸಿಬ್ಬಂದಿಯಿಂದ ಹುಡುಕಾಟ

» **ಚಳ್ಳಕೆರೆ**

ತಾಲ್ಲೂಕಿನ ನಾಯಕನಹಟ್ಟಿ ಹೋಬಳಿಯ ನೇರಲಗುಂಟೆ ಗ್ರಾಮದಲ್ಲಿ ಬಾವಿಯಲ್ಲಿ ಈಜಲು ಹೋದ ಯುವ ನೀರುಪಾಲಾದ ಘಟನೆ ಗುರುವಾರ ಮಧ್ಯಾಹ್ನ ನಡೆದಿದೆ.

ಗ್ರಾಮದ ತಿಪ್ಪೇಸ್ವಾಮಿ ಎಂಬುವವರ ಪುತ್ರ ಸೂರ್ಯಪ್ರಕಾಶ್(16) ಎಂಬ ಯುವಕ ಮಧ್ಯಾಹ್ನ ಬಿಸಿಲಿನ ಧಗೆಯನ್ನು ತಣಿವಾರಿಸಿಕೊಳ್ಳಲು ಗ್ರಾಮದ ಹೊರವಲಯದಲ್ಲಿರುವ ತುಂಬಿದ ಬಾವಿಯಲ್ಲಿ ಈಜಲು ನೀರಿಗೆ ಇಳಿದಿದ್ದಾನೆ. ಎಷ್ಟು ಸಮಯವಾದರೂ ಮೇಲೆಬಾರದಿದ್ದಾಗ, ಗ್ರಾಮದ ಜನರು ಕೂಡಲೇ ಅಗ್ನಿಶಾಮಕ, ಪೊಲೀಸ್ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಬಂದ ಅಗ್ನಿಶಾಮಕ ಸಿಬ್ಬಂದಿ ಯುವಕನಿಗಾಗಿ ಹುಡುಕಾಟ ನಡೆಸುತ್ತಿದ್ದಾರೆ.



ನಗರದ ಖಾಸಗಿ ಶಾಲೆಯಲ್ಲಿ ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿದ್ದ ಯುವಕ ಸೂರ್ಯಪ್ರಕಾಶ್ ರಜೆ ಹಿನ್ನೆಲೆಯಲ್ಲಿ ಗುರುವಾರ ಮಧ್ಯಾಹ್ನ ಸ್ನೇಹಿತರೊಟ್ಟಿಗೆ ಈಜಲು ಹೋಗಿದ್ದಾನೆ. ಈ ವೇಳೆ ತುಂಬಿದ ಬಾವಿಗೆ ಇಳಿದ ಯುವಕ ಮೇಲೆಬಾರಲಾಗಿಲ್ಲ. ಯುವಕನಿಗಾಗಿ ಅಗ್ನಿಶಾಮಕ ಸಿಬ್ಬಂದಿ ಹುಡುಕಾಟ ಮುಂದುವರೆದಿದೆ.

## ಹಾಲು ಉತ್ಪಾದಕರ ಸಹಕಾರ ಸಂಘ ನೀಡುವ ಸೌಲಭ್ಯಗಳನ್ನು ಸದುಪಯೋಗ ಪಡಿಸಿಕೊಳ್ಳಿ



» **ಚಳ್ಳಕೆರೆ**

ಶಿವಮೊಗ್ಗ ಹಾಲು ಉತ್ಪಾದಕರ ಸಹಕಾರ ಸಂಘದಿಂದ ಹಾಲುಒಕ್ಕೂಟ ಸರ್ವತೋಮುಖ ಅಭಿವೃದ್ಧಿಗೆ ಆರ್ಥಿಕ ಸಹಾಯ, ಸಂಘಗಳ ಬಲವರ್ಧನೆಗೆ ಅಗತ್ಯವಿರುವ ಸೌಲಭ್ಯಗಳನ್ನು ನೀಡುವ ಜೊತೆಗೆ ಏಕರೂಪ ತಂತ್ರಾಂಶವನ್ನು ಅಳವಡಿಸುವ ಮೂಲಕ ಪಾರದರ್ಶಕತೆ ಕಾಪಾಡಿಕೊಳ್ಳುತ್ತಿದೆ ಎಂದು ಶಿವಮೊಗ್ಗ ಹಾಲು ಒಕ್ಕೂಟದ ಜಿಲ್ಲಾ ನಿರ್ದೇಶಕ ಬಿ.ಸಿ.ಸಂಜೀವಮೂರ್ತಿ ಹೇಳಿದರು. ಅವರು ನಗರದ ಕಚೇರಿಯಲ್ಲಿ ಚಳ್ಳಕೆರೆ, ಮೊಳಕಾಲ್ಮೂರು ತಾಲ್ಲೂಕಿನ ಹಾಲು ಉತ್ಪಾದಕರ ಸಂಘಗಳ ಕಾರ್ಯದರ್ಶಿಗಳಿಗೆ ತಂತ್ರಾಂಶವನ್ನು ಅಳವಡಿಕೆ ಒಂದು ದಿನದ ಕಾರ್ಯಗಾರವನ್ನು ಉದ್ಘಾಟಿಸಿ ಮಾತನಾಡಿದರು. ತರಬೇತಿಯಲ್ಲಿ ಪಾಲ್ಗೊಂಡ ಎರಡೂ ತಾಲ್ಲೂಕಿನ ಕಾರ್ಯದರ್ಶಿಗಳು ತರಬೇತಿ ನಂತರ ತಮ್ಮ, ತಮ್ಮ ಕೇಂದ್ರಗಳಲ್ಲಿ ತಂತ್ರಾಂಶವನ್ನು ಅಳವಡಿಸಿಕೊಂಡು ರೈತರಿಗೆ ಮತ್ತು ಸಾರ್ವಜನಿಕರಿಗೆ ಯಾವುದೇ ಸಮಸ್ಯೆ ಉಂಟಾಗದಂತೆ ಪಾರದರ್ಶಕವಾಗಿ ತಮ್ಮ ಕಾರ್ಯಗಳನ್ನು ನಿಬಾಯಿಸಬಹುದಾಗಿದೆ. ಒಕ್ಕೂಟಗಳ ಅಭಿವೃದ್ಧಿಗೆ ಎಲ್ಲರ ಸಹಕಾರ ಮತ್ತು ಪ್ರಾಮಾಣಿಕತೆ ಅಗತ್ಯವಿದ್ದು, ಒಗ್ಗೂಡಿ ಕೆಲಸ ಮಾಡಿದರೆ ಉತ್ತಮ ಲಾಭದತ್ತ ನಡೆಯಬಹುದು ಎಂದರು. ಇದೇ ವೇಳೆಯಲ್ಲಿ ಬೆಳಗೆರೆ ಹಾಲುಉತ್ಪಾದಕರ ಸಹಕಾರ ಸಂಘದ ನೂತನ ಕಟ್ಟಡ ನಿರ್ಮಾಣಕ್ಕೆ ಒಕ್ಕೂಟದಿಂದ ಬಿಡುಗಡೆಯಾದ ಮೊದಲನೇ ಹಂತದ 1.50ಲಕ್ಷ ಚೆಕನ್ನು ಸಂಘದ ಕಾರ್ಯದರ್ಶಿ ಮಂಜುನಾಥಗೆ ಹಸ್ತಾಂತರಿಸಿದರು. ಒಕ್ಕೂಟದಿಂದ ಬಿಡುಗಡೆಯಾಗುವ ಹಣವನ್ನು ಸದುಪಯೋಗ ಪಡಿಸಿಕೊಂಡು ಹಾಲುಉತ್ಪಾದಕರ ಸಹಕಾರ ಸಂಘಗಳನ್ನು ಬಲಪಡಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು. ವಿಭಾಗೀಯ ಅಧಿಕಾರಿ ಎಂ.ಪುಟ್ಟರಾಜು, ಒಕ್ಕೂಟದ ವ್ಯವಸ್ಥಾಪಕಿ ಅನುಷಾ, ವಿಸ್ತರಣಾಧಿಕಾರಿ ನಯಾಜ್‌ಬೇಗ್, ಪ್ರಹ್ಲಾದ್, ರಾಘವೇಂದ್ರ, ಸುರೇಶ್‌ಬಾಬು ಮುಂತಾದವರು ಉಪಸ್ಥಿತರಿದ್ದರು.

## ಹೊಳಲ್ಕೆರೆ: ಕಾಲುಬಾಯಿಜ್ವರ ಲಸಿಕೆ ಕಾರ್ಯಕ್ರಮ



» **ಹೊಳಲ್ಕೆರೆ**

ಪಟ್ಟಣದ ಪಶುಪಾಲನಾ ಇಲಾಖೆಯ ವತಿಯಿಂದ ಜಾನುವಾರುಗಳಿಗೆ ಉಚಿತವಾಗಿ ಕಾಲು ಬಾಯಿ ಜ್ವರ ಹಾಗೂ ಚರ್ಮಘಂಟು ರೋಗ ನಿಯಂತ್ರಣಕ್ಕೆ ಲಸಿಕೆಯನ್ನು ಉಚಿತವಾಗಿ ಹಾಕಲಾಗುತ್ತಿದೆ. ರೈತರು ಸದ್ಬಳಕೆ ಮಾಡಿಕೊಳ್ಳಬೇಕೆಂದು ಪುರಸಭೆಯ ಉಪಾಧ್ಯಕ್ಷೆ ಹೆಚ್.ಆರ್ ನಾಗರತ್ನವೇದಮೂರ್ತಿ ತಿಳಿಸಿದರು.

ಅವರು ಹೊಳಲ್ಕೆರೆ ಪಟ್ಟಣದ ಕೊತ್ತಲ ಆಂಜನೇಯ ದೇವಸ್ಥಾನದ ಆವರಣದಲ್ಲಿ ಜಾನುವಾರುಗಳಿಗೆ ಪಶುಪಾಲನಾ ಇಲಾಖೆ ಶನಿವಾರ ಕೈಗೊಂಡ ಉಚಿತ ಲಸಿಕೆ ಹಾಕುವ ಯೋಜನೆಗೆ ಚಾಲನೆ ನೀಡಿ ಮಾತನಾಡಿದರು. ಸರ್ಕಾರ 7ನೇ ಸುತ್ತಿನ ಕಾಲು ಬಾಯಿ ರೋಗಾ ಲಸಿಕ ಅಭಿಯಾನವನ್ನು ರಾಜ್ಯದಲ್ಲಿ ಹಮ್ಮಿಕೊಂಡಿದ್ದು, ಜಾನುವಾರುಗಳಲ್ಲಿ ಕಾಲು ಬಾಯಿ ರೋಗದ ವೈರಾಣು ಹರಡದಂತೆ ಸಾಂಕ್ರಾಮಿಕ ರೋಗ ತಡೆಗಟ್ಟಬೇಕು. ರೋಗ ನಿಯಂತ್ರಿಸಲು ಮತ್ತು ನಿರ್ಮೂಲನೆ ಮಾಡಲು ಪ್ರತಿ ಆರು ತಿಂಗಳಿಗೊಮ್ಮೆ ಜಾನುವಾರುಗಳಿಗೆ ಲಸಿಕೆ ಹಾಕಿಸಬೇಕು. ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ ಜಿಲ್ಲೆಯಲ್ಲಿರುವ ಎಲ್ಲಾ ಜಾನುವಾರುಗಳಿಗೆ ಇದೇ ತಿಂಗಳ 26 ರಿಂದ ಮೇ ತಿಂಗಳ 9 ರ ವರೆಗೂ ಲಸಿಕೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಪ್ರತಿಯೊಬ್ಬ ನಾಗರಿಕರು, ರೈತರು ತಮ್ಮಲ್ಲಿರುವ ಜಾನುವಾರುಗಳಿಗೆ ಲಸಿಕೆ ಹಾಕಿಸಿಕೊಳ್ಳುವ ಮೂಲಕ ಜಾನುವಾರುಗಳ ರೋಗ ನಿಯಂತ್ರಣದ ಜೊತೆಗೆ ರೋಗಮುಕ್ತ ಜಾನುವಾರುಗಳನ್ನಾಗಿ ಕಾಪಾಡಿಕೊಳ್ಳಬೇಕು ಕರೆ ನೀಡಿದರು.

### ಪ್ರಮುಖ ಸುದ್ದಿ

# ಚರ್ಮದ ಗಂಟುರೋಗದಿಂದ ಜಾನುವಾರುಗಳಿಗೆ ಮುಕ್ತಿ ನೀಡಲು ಕಾಲುಬಾಯಿಜ್ವರ ಲಸಿಕೆ ಕಾರ್ಯಕ್ರಮ

» **ಚಳ್ಳಕೆರೆ**

ಪ್ರತಿವರ್ಷದಂತೆ ಈ ವರ್ಷವೂ ಜಾನುವಾರುಗಳನ್ನು ಚರ್ಮಗಂಟು ರೋಗದಿಂದ ದೂರವಿಡಲು ಆ ರೋಗ ವ್ಯಾಪಿಸದಂತೆ ತಡೆಯುವ ನಿಟ್ಟಿನಲ್ಲಿ ಕಾಲುಬಾಯಿ ಜ್ವರ ಲಸಿಕೆಯನ್ನು ಎಲ್ಲಾ ಹಂತದ ಜಾನುವಾರುಗಳಿಗೆ ಏ.26ರಿಂದ ಜೂನ್‌9ರ ತನಕ ಉಚಿತವಾಗಿ ಲಸಿಕೆ ಹಾಕಲಾಗುವುದು ಎಂದು ಪಶು ವೈದ್ಯ ಇಲಾಖೆಯ ಸಹಾಯಕ ನಿರ್ದೇಶಕ ಡಾ.ರೇವಣ್ಣ ತಿಳಿಸಿದರು.



ಅವರು, ಪತ್ರಿಕೆಗೆ ಮಾಹಿತಿ ನೀಡಿ, ಮೊದಲದಿನವೇತಾಲ್ಲೂಕಿನಾದ್ಯಂತ 1200 ಜಾನುವಾರುಗಳಿಗೆ ಲಸಿಕೆ ಹಾಕಲಾಗಿದೆ. ಜಾನುವಾರುಗಳಿಗೆ ಲಸಿಕೆ ಹಾಕುವ ಕುರಿತು ಈಗಾಗಲೇ ಮುಂಜಾಗ್ರತಾ ಕ್ರಮವಾಗಿ ಗ್ರಾಮೀಣ ಭಾಗಗಳಲ್ಲಿ ಜನರಿಗೆ ಲಸಿಕೆಗಳನ್ನು ಜಾನುವಾರುಗಳಿಗೆ ತಪ್ಪದೆ ಹಾಕಿಸುವಂತೆ ಮನವಿ ಮಾಡಲಾಗಿದೆ. ಪಶುವೈದ್ಯ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮನೆ, ಮನೆಗೂ ತೆರಳಿ ಕಾಲುಬಾಯಿ ಲಸಿಕೆ ಬಗ್ಗೆ ಮಾಹಿತಿ ನೀಡಿದ್ದಾರೆ. ಜಾನುವಾರುಗಳನ್ನು ಹೊಂದಿದ ಎಲ್ಲರೂ ಸಹ ತಪ್ಪದೆ ಲಸಿಕೆ ಹಾಕಿಸುವಂತೆ ಮನವಿ ಮಾಡಿದರು.

ಮುಖ್ಯ ಪಶುವೈದ್ಯಾಧಿಕಾರಿ ವಿಜಯಕುಮಾರ್, ಶ್ರೀನಿವಾಸ್ ಬಾಬು, ರಾಜಣ್ಣ, ಡಾ.ಕಾವೇರಿ, ಸಿಮ್ರಾನ್, ಶಿವಣ್ಣ, ಜಾನುವಾರು ಅಧಿಕಾರಿಗಳಾದ ರಂಗಪ್ಪ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಕಾಲು ಬಾಯಿ ಮತ್ತು ಚರ್ಮಗಂಟು ರೋಗದ ಲಸಿಕಾ ಅಭಿಯಾನ



» **ಪರಶುರಾಂಪುರ**

ಪಶುಪಾಲಕರು ಜಾನುವಾರುಗಳಿಗೆ ಕಾಲು ಬಾಯಿ ಮತ್ತು ಚರ್ಮಗಂಟು ರೋಗವನ್ನ ತಡೆಗಟ್ಟಲು ಮುನ್ನೆಚ್ಚರಿಕೆ ಕ್ರಮವಾಗಿ ಆಯೋಜಿಸಿರುವ ಲಸಿಕೆ ಅಭಿಯಾನದ ಸದುಪಯೋಗ ಪಡೆಯಿರಿ ಎಂದು ಪಶುವೈದ್ಯಾಧಿಕಾರಿ ರಾಜಣ್ಣ ತಿಳಿಸಿದರು. ಸಮೀಪದ ಪುರ್ಲಹಳ್ಳಿ ವ್ಯಾಪ್ತಿಯ ವಿವಿಧ ಗ್ರಾಮಗಳಲ್ಲಿ ಪಶು ವೈದ್ಯಕೀಯ ಇಲಾಖೆಯ ವತಿಯಿಂದ ಆಯೋಜಿಸಿದ್ದ ಉಚಿತ ಲಸಿಕಾ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು. ಸದರಿ ಲಸಿಕೆಗಳನ್ನು ತಮ್ಮ ಜಾನುವಾರುಗಳಿಗೆ ಲಸಿಕೆ ಹಾಕಿಸಿ ತಮ್ಮ ಜಾನುವಾರುಗಳನ್ನು ಮಾರಕ ಖಾಯಿಲೆಗಳಿಂದ ರಕ್ಷಿಸಿಕೊಳ್ಳಲು ತಿಳಿಸಿದರು. ಲಸಿಕಾ ಕಾರ್ಯಕ್ರಮದಲ್ಲಿ ಮುಖ್ಯ ಪಶುವೈದ್ಯಾಧಿಕಾರಿ ಡಾ.ರಾಜಣ್ಣ ಹಾಗೂ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು .

### ಬಾಲನ್ಯಾಯ ಮಂಡಳಿ ಕಚೇರಿ ಜಿಪಂ ಆವರಣಕ್ಕೆ ಸ್ಥಳಾಂತರ

» **ಚಿತ್ರದುರ್ಗ**

ಬಾಲನ್ಯಾಯ ಮಂಡಳಿ ಚಿತ್ರದುರ್ಗ ಕಚೇರಿಯು ಬಾಲಭವನ ಆವರಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಆವರಣದ ಕಟ್ಟಡದಲ್ಲಿ ಕಲಾಪಗಳನ್ನು ನಡೆಸಲಾಗುತ್ತಿದ್ದು, ಈ ಬಾಲನ್ಯಾಯ ಮಂಡಳಿಯನ್ನು ಜಿಲ್ಲಾ ಪಂಚಾಯಿತಿ ಆವರಣದಲ್ಲಿರುವ ಹಿಂದಿನ ಆಯುಷ್ ಇಲಾಖೆ ನಡೆಸುತ್ತಿದ್ದ ಕಟ್ಟಡಕ್ಕೆ ಸ್ಥಳಾಂತರಿಸಲಾಗಿದೆ. 2025ರ ಮೇ 02 ರಿಂದ ಕಲಾಪಗಳು ಜಿಲ್ಲಾ ಪಂಚಾಯತ್ ಆವರಣದ ಕಟ್ಟಡದಲ್ಲಿ ನಡೆಸಲಾಗುತ್ತದೆ ಎಂದು ಚಿತ್ರದುರ್ಗ ಸರ್ಕಾರಿ ವೀಕ್ಷಣಾಲಯ ಪರಿವೀಕ್ಷಣಾಧಿಕಾರಿಗಳು ಹಾಗೂ ಅಧೀಕ್ಷಕರು ತಿಳಿಸಿದ್ದಾರೆ.

### ಕನ್ನಡ ಪ್ರಾಧಿಕಾರದ ಅಧ್ಯಕ್ಷರ ಪ್ರವಾಸ

» **ದಾವಣಗೆರೆ**

ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ಇವರು ಏಪ್ರಿಲ್ 28 ರಂದು ದಾವಣಗೆರೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ. ಅಂದು ಬೆಳಿಗ್ಗೆ 11 ಗಂಟೆಗೆ ಹರಿಹರದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣ ಸಮೀಪದ ಗುರುಭವನದಲ್ಲಿ ನಡೆಯಲಿರುವ ಡಾ.ಬಿ.ಆರ್.ಅಂಬೇಡ್ಕರ್ ರವರ 134ನೇ ಜಯಂತಿ ನಿಮಿತ್ತ 134 ಸಾಧಕರಿಗೆ ಸನ್ಮಾನ ಸಮಾರಂಭದಲ್ಲಿ ಭಾಗವಹಿಸಿ ಕೂಡಲಸಂಗಮಕ್ಕೆ ಪ್ರಯಾಣಿಸುವರು.

### ಡಿಪ್ಲೋಮಾ ಪರೀಕ್ಷೆಗಳಿಗೆ ಪರೀಕ್ಷಾ ಶುಲ್ಕ ಪಾವತಿಸಲು ಕಾಲಾವಕಾಶ

» **ದಾವಣಗೆರೆ**

ಸಿ-3, ಸಿ-9, ಸಿ-15 ಪಠ್ಯಕ್ರಮದಲ್ಲಿ ಪ್ರಥಮ, ತೃತೀಯ ಸೆಮಿಸ್ಟರ್‌ಗೆ ಪ್ರವೇಶ ಪಡೆದು 6, 9 ವರ್ಷಗಳಕಲಾವಧಿಮೀರಿದವಿದ್ಯಾರ್ಥಿಗಳಿಗೆಮಾತ್ರ ಏಪ್ರಿಲ್, ಮೇ ಪರೀಕ್ಷೆಗಳಿಗೆ ಹಾಜರಾಗಬಹುದು. ಈ ವಿದ್ಯಾರ್ಥಿಗಳ ದಂಡ ರಹಿತವಾಗಿ ನಿಗದಿತ ಪರೀಕ್ಷಾ ಶುಲ್ಕವನ್ನು ಏಪ್ರಿಲ್ 26 ರೊಳಗಾಗಿ ಪಾವತಿಸಿ ನೋಂದಾಯಿಸಿಕೊಳ್ಳಬೇಕೆಂದು ಸರ್ಕಾರಿ ಪಾಲಿಟೆಕ್ನಿಕ್ ಪ್ರಚಾರ್ಯರರು ತಿಳಿಸಿದ್ದಾರೆ.

### ಪ್ರವೇಶ ಪರೀಕ್ಷೆ

» **ದಾವಣಗೆರೆ**

ಅಲ್ಪಸಂಖ್ಯಾತರ ನಿರ್ದೇಶನಾಲಯದಡಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿದೇಸಾಯಿ ವಸತಿ ಶಾಲೆಗಳು, ಸರ್ಕಾರಿ ಮುಸ್ಲಿಂ ವಸತಿ ಶಾಲೆಗಳು ಹಾಗೂ ಡಾ॥ಎ.ಪಿ.ಜೆಅಬ್ದುಲ್ ಕಲಾಂ ವಸತಿ ಶಾಲೆಗಳಿಗೆ ಪ್ರಸಕ್ತ ಸಾಲಿನ 6ನೇ ತರಗತಿ ಪ್ರವೇಶಕ್ಕಾಗಿ ಏಪ್ರಿಲ್ 27 ರಂದು ನಗರದ ಎ.ವಿ.ಕಮಲಮ್ಮ ಮಹಿಳಾ ಕಾಲೇಜು, (ಎ.ವಿ.ಕೆ ಕಾಲೇಜು) ಅಕ್ಕಮದೇವಿ ರಸ್ತೆ, ಪಿ.ಜೆ ಬಡಾವಣೆ, ದಾವಣಗೆರೆ ಇಲ್ಲಿ ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು. ಈ ಪರೀಕ್ಷೆಗೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಯ 6ನೇ ತರಗತಿ ಪ್ರವೇಶಕ್ಕಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ಅರ್ಜಿ ಸಲ್ಲಿಸಿರುವ ಎಲ್ಲಾ ವಿದ್ಯಾರ್ಥಿಗಳು https:// domgok.in/Admission/StudentHalticket ವೆಬ್‌ಸೈಟ್‌ನಲ್ಲಿ ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಅಂದು ಬೆಳಗ್ಗೆ 9.30ಕ್ಕೆ ಪರೀಕ್ಷೆಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08192-250022 ಸಂಪರ್ಕಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಅಧಿಕಾರಿಯವರು ತಿಳಿಸಿದ್ದಾರೆ,

# ಸರ್ಕಾರದ ನಡೆ ಕಾರ್ಯಕರ್ತರ ಕಡೆ

» **ಚಿತ್ರದುರ್ಗ**



ಪಕ್ಷಕ್ಕೆ ಹೆಚ್ಚಿನ ಮಹತ್ವ ಕೊಟ್ಟು ಬಲಪಡಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕರ್ತರಲ್ಲಿ ಮನವಿ ಮಾಡಿದರು.

ಚಿತ್ರದುರ್ಗ ವಿಧಾನಸಭಾ ಕ್ಷೇತ್ರ, ನಗರ ಮತ್ತು ಗ್ರಾಮಾಂತರ ಮಂಡಲದ ವತಿಯಿಂದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಳ್ಳಲಾಗಿದ್ದ ಪಕ್ಷದ ನಡೆ ಕಾರ್ಯಕರ್ತರ ಕಡೆ ವಿಶೇಷ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ಪಕ್ಷವನ್ನು ಯಶಸ್ವಿಯಾಗಿ ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ಪಕ್ಷ ಅಧಿಕಾರಕ್ಕೆ ಬಂದು ಎರಡು ವರ್ಷಗಳಾಗುತ್ತಿದೆ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ, ಪುರಸಭೆ, ಪಟ್ಟಣ ಪಂಚಾಯಿತಿ, ನಗರಸಭೆ ಚುನಾವಣೆಗಳು ಬರುತ್ತಿದ್ದು, ಕಾರ್ಯಕರ್ತರಲ್ಲಿ ಹುರುಪು ತುಂಬುವುದಕ್ಕಾಗಿ ಪಕ್ಷದ ನಡೆ ಕಾರ್ಯಕರ್ತರ ಕಡೆ ಕಾರ್ಯಕ್ರಮ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಆಗಿದೆ. ಕಾಂಗ್ರೆಸ್ ಪಕ್ಷ ನುಡಿದಂತೆ ನಡೆದಿದೆ. ಐದು ಉಚಿತ ಗ್ಯಾರೆಂಟಿಗಳಿಗೆ ವರ್ಷಕ್ಕೆ 57 ಸಾವಿರ ಕೋಟಿ ರೂ.ಗಳ ಖರ್ಚಾಗುತ್ತಿದೆ. ಬಿಜೆಪಿ.ಯವರು ಮೂರು ಲಕ್ಷ ಕೋಟಿ ರೂ.ಗಳ ಸಾಲ ಹೊರಿಸಿ ಹೋಗಿದ್ದಾರೆ. ಇವೆಲ್ಲವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಿಭಾಯಿಸಿಕೊಂಡು ಅಪ್ಪರ್‌ಭದ್ರಾ ಯೋಜನೆಗೆ 2600 ಕೋಟಿ ರೂ.ಗಳನ್ನು ಕೊಟ್ಟಿದ್ದಾರೆ. ಕಾರ್ಯಕರ್ತರು ಪಕ್ಷ ಸಂಘಟನೆಗೆ ಒತ್ತು ಕೊಡಿ ಎಂದು ಡಿ.ಸುಧಾಕರ್ ಸೂಚಿಸಿದರು.

ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿ ಜಿಲ್ಲಾ ಉಸ್ತುವಾರಿ ರಾಮಕೃಷ್ಣಪ್ಪ ಮಾತನಾಡಿ ವಿಧಾನಸಭೆ ಚುನಾವಣೆ ಪೂರ್ವದಲ್ಲಿ ನಮ್ಮ ಪಕ್ಷ ಘೋಷಿಸಿದಂತೆ ಅಧಿಕಾರಕ್ಕೆ ಬಂದ ಕೂಡಲೆ ಐದು ಉಚಿತ ಗ್ಯಾರೆಂಟಿಗಳನ್ನು ರಾಜ್ಯದ ಜನರಿಗೆ ನೀಡಿತು. ಅದು ಪ್ರತಿ ಮನೆಗೆ ತಲುಪುತ್ತಿದೆಯೋ ಇಲ್ಲವೋ ಎನ್ನುವುದರ ಕಡೆ ಕಾರ್ಯಕರ್ತರು ನಿಗಾಹರಿಸಬೇಕು. ಎಲ್ಲಾ ಜಾತಿಯ ಬಡವರಿಗೆ ಪಕ್ಷದ ಯೋಜನೆಗಳು ಪ್ರಯೋಜನಕಾರಿಯಾಗಿದೆ. ಮುಂಬರುವ ಚುನಾವಣೆಗೆ ಈಗಿನಿಂದಲೇ ಕಾರ್ಯಕರ್ತರು ಸಜ್ಜಾಗಿ ಎಂದು ವಿನಂತಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಮಾತನಾಡಿ 25 ವರ್ಷಗಳ ನಂತರ ಚಿತ್ರದುರ್ಗದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆಯೆಂದರೆ ಕಾರ್ಯಕರ್ತರುಗಳೆ ಕಾರಣ. ಐವತ್ತು ಸಾವಿರ ಮತಗಳ ಅಂತರದಿಂದ ನೀವುಗಳು ನನ್ನನ್ನು ಗೆಲ್ಲಿಸಿದ್ದೀರ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೀಡಿರುವ ಪಂಚ ಗ್ಯಾರೆಂಟಿಗಳಿಂದ ಬಡವರ ಜೀವನ ಸುಧಾರಣೆಯಾಗಿದೆ. ಕಾರ್ಯಕರ್ತರು ಮನೆ ಮನೆಗೆ ಹೋಗಿ ಗ್ಯಾರೆಂಟಿಗಳನ್ನು ತಲುಪಿಸುವ ಕೆಲಸ ಮಾಡಬೇಕು. ಮುಂದಿನ ದಿನಗಳಲ್ಲಿ ಪಕ್ಷದ ನಿಷ್ಟಾವಂತ ಕಾರ್ಯಕರ್ತರಿಗೆ ಸ್ಥಾನಮಾನಗಳು ಸಿಕ್ಕೆ ಸಿಗುತ್ತವೆ. ನಿರಾಸೆ ಬೇಡ. ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಸ್ಥಳೀಯ ಸಂಸ್ಥೆ ಚುನಾವಣೆಗಳು ನಡೆಯುವುದರಿಂದ ಪ್ರತಿ ವಾರ್ಡ್, ಪಂಚಾಯಿತಿ, ಬೂತ್‌ಗಳಿಗೆ ಭೇಟಿ ಕೊಡುತ್ತೇವೆ. ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರುವುದು ನಿಮ್ಮ ಕೈಯಲ್ಲಿದೆ ಎಂದು ಕಾರ್ಯಕರ್ತರಲ್ಲಿ ಚೈತನ್ಯ ತುಂಬಿದರು.

ಶಾಸಕ ಟಿ.ರಘುಮೂರ್ತಿ ಮಾತನಾಡಿ 2023 ರಲ್ಲಿ ಪಕ್ಷ ರಾಜ್ಯದಲ್ಲಿ ಅಧಿಕಾರಕ್ಕೆ ಬರಲು ಕಾರ್ಯಕರ್ತರ ಶ್ರಮವಿದೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕಾರ್ಯಕರ್ತರ ಒಡನಾಡಿಯಾಗಿ ಕೆಲಸ ಮಾಡುತ್ತ ಅಹವಾಲುಗಳನ್ನು ಆಲಿಸುತ್ತಿದ್ದಾರೆ. ವಿಧಾನಸಭೆ ಚುನಾವಣೆ ಪೂರ್ವದಲ್ಲಿಘೋಷಿಸಿದಪ್ರಣಾಳಿಕೆಯಂತೆ ಎಲ್ಲವನ್ನು ಈಡೇರಿಸಿದೆ. ಪ್ರತಿ ವರ್ಷ ಒಂದು ವಿಧಾನಸಭೆ ಕ್ಷೇತ್ರಕ್ಕೆ 240 ಕೋಟಿ ರೂ.ಗಳು ಸಿಗುತ್ತಿದೆ. ಭಾರತದಲ್ಲಿ ಎಲ್ಲಿಯೂ ಇಂತಹ ಯೋಜನೆಗಳಿಲ್ಲ. ಕಾರ್ಯಕರ್ತರು ಮನಸ್ಸು ಮಾಡಿದ್ದರಿಂದ ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಿದೆ. ಅದೇ ರೀತಿ ಜಿಲ್ಲಾ ಪಂಚಾಯಿತಿ, ತಾಲ್ಲೂಕು ಪಂಚಾಯಿತಿ ಹಾಗೂ ಪುರಸಭೆ, ಪಟ್ಟಣ ಪಂಚಾಯಿತಿ, ನಗರಸಭೆ ಚುನಾವಣೆಗಳಲ್ಲಿಯೂ ಪಕ್ಷಕ್ಕೆ ಗೆಲುವು ತಂದು ಕೊಡುವ ನಿಟ್ಟಿನಲ್ಲಿ ಈಗಿನಿಂದಲೆ ಸಿದ್ದರಾಗುವಂತೆ ಹೇಳಿದರು.

ಕಾಂಗ್ರೆಸ್ ಬೆಲೆ ಏರಿಸಿದೆ ಎಂದು ಬಿಜೆಪಿ. ಜನಾಕ್ರೋಶ ಯಾತ್ರೆ ನಡೆಸಿ ನಮ್ಮ ಪಕ್ಷದ ಬಗ್ಗೆ ಅಪ ಪ್ರಚಾರ ಮಾಡುತ್ತಿದೆ. ರಾಜ್ಯದಲ್ಲಿ ಎಲ್ಲಿಯೂ ಜನ ಆಕ್ರೋಶಗೊಂಡಿಲ್ಲ. ಪಕ್ಷದಲ್ಲಿ ಸ್ಥಾನಮಾನ ಸಿಗಲಿಲ್ಲವೆಂಬ ಮುನಿಸು ಬೇಡ. ಕಾಂಗ್ರೆಸ್‌ಗೆ 145 ವರ್ಷಗಳ ಇತಿಹಾಸವಿದೆ. ಬಿಜೆಪಿ.ಗೆ ಯಾವ ಇತಿಹಾಸವಿದೆ ಎಂದು ಪ್ರಶ್ನಿಸಿದರು?

ಶಾಸಕ ಬಿ.ಜಿ.ಗೋವಿಂದಪ್ಪ ಮಾತನಾಡುತ್ತ ಇದು ಚುನಾವಣೆ ವರ್ಷ. ಜಿಲ್ಲಾ ಪ0ಚಾಯಿತಿ, ತಾಲ್ಲೂಕು ಪಂಚಾಯಿತಿ, ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳನ್ನು ಗೆಲ್ಲಿಸುವ ಹೊಣೆಗಾರಿಕೆ ಕಾರ್ಯಕರ್ತರುಗಳ ಮೇಲಿದೆ. ಜಿಲ್ಲಾ ಪಂಚಾಯಿತಿಯಲ್ಲಿ ನಮ್ಮ ಪಕ್ಷ ಅಸ್ತಿತ್ವ ಉಳಿಸಿಕೊಳ್ಳಬೇಕು. ಎಂದರು.

ಕೆ.ಪಿ.ಸಿ.ಸಿ. ಪ್ರಧಾನ ಕಾರ್ಯದರ್ಶಿ ಹನುಮಲಿ ಷಣ್ಮುಖಪ್ಪ ಮಾತನಾಡಿ ಐದು ಉಚಿತ ಗ್ಯಾರೆಂಟಿಗಳು ಜನರಿಗೆ ಮುಟ್ಟಿದೆಯೋ ಇಲ್ಲವೋ ಎನ್ನುವುದನ್ನು ಮನೆ ಮನೆಗೆ ಭೇಟಿ ನೀಡಿ ಕಾರ್ಯಕರ್ತರು ತಿಳಿದುಕೊಳ್ಳಬೇಕು. ಗ್ಯಾರೆಂಟಿ ಯೋಜನೆಗಳಿಗೆ ಪ್ರತಿ ವರ್ಷ 62 ಸಾವಿರ ಕೋಟಿ ರೂ.ಗಳು ಖರ್ಚಾಗುತ್ತಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ಕೊಟ್ಟ ಭರವಸೆಗಳನ್ನು ಈಡೇರಿಸುತ್ತಿದ್ದಾರೆ. ಸರ್ಕಾರ ನುಡಿದಂತೆ ನಡೆದಿದೆ ಎನ್ನುವುದನ್ನು ಜನರಿಗೆ ಮನವರಿಕೆ ಮಾಡಿ ಮುಂದೆ ನಡೆಯುವ ಎಲ್ಲಾ ಚುನಾವಣೆಗಳಲ್ಲಿಯೂ ಪಕ್ಷವನ್ನು ಗೆಲ್ಲಿಸಿ ಎಂದು ಕಾರ್ಯಕರ್ತರಲ್ಲಿ ವಿನಂತಿಸಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಮಾತನಾಡುತ್ತ ಕಾರ್ಯಕರ್ತರಲ್ಲಿ ಕಿಂಚಿತ್ತು ಉತ್ಸಾಹ ಕಮ್ಮಿಯಾಗಿಲ್ಲ. ನಿಷ್ಟೆಯಿಂದ ಪಕ್ಷದ ಕೆಲಸ ಮಾಡುತ್ತಿದ್ದಾರೆ. ಆಶ್ರಯ ಯೋಜನೆಯಡಿ ಒಂದು ಸಾವಿರ ಮನೆಗಳ ನಿರ್ಮಾಣಕ್ಕೆ ಬುನಾದಿ ಹಾಕಿ ನಿಲ್ಲಿಸಲಾಗಿದೆ. ಜನ ಮನೆಗಳಿಗೆ ಆಸೆಯಿಟ್ಟುಕೊಂಡಿರುವುದರಿಂದ ಮನೆಗಳನ್ನು ಪೂರ್ಣಗೊಳಿಸಿ ಚುನಾವಣೆಯಲ್ಲಿ ಪ್ರಾಮಾಣಿಕ ಕಾರ್ಯಕರ್ತರಿಗೆ ಆದ್ಯತೆ ಕೊಡಿ ಎಂದು ಜಿಲ್ಲಾ ಉಸ್ತುವಾರಿ ಸಚಿವರಲ್ಲಿ ಮನವಿ ಮಾಡಿದರು.ಜೆ.ಜೆ.ಹಟ್ಟಿ ತಿಪ್ಪೇಸ್ವಾಮಿ, ವಿಜಯ ಕುಮಾರ್, ಆರ್.ಶಿವಣ್ಣ, ಕೆ.ಅನ್ವರ್‌ಪಾಷ, ಮುನಿರಾ ಎ.ಮಕಾಂದಾರ್, ಕೆ.ಡಿ.ಪಿ.ಸದಸ್ಯ ಕೆ.ಸಿ.ನಾಗರಾಜ್ ಮಾತನಾಡಿದರು.ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೆ.ಪಿ.ಸಂಪತ್‌ಕುಮಾರ್, ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷರುಗಳಾದ ಕುಮಾರ್‌ಗೌಡ, ಡಿ.ಟಿ.ವೆಂಕಟೇಶ್, ಎಸ್.ಎನ್.ರವಿಕುಮಾರ್, ಅಲ್ಪಸಂಖ್ಯಾತ ವಿಭಾಗದ ಅಧ್ಯಕ್ಷ ಸೈಯದ್‌ಖುದ್ದೂಸ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ಜಿಲ್ಲಾ ಕಾಂಗ್ರೆಸ್ ಕಾನೂನು ವಿಭಾಗದ ಅಧ್ಯಕ್ಷ ಸುದರ್ಶನ್, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ನಗರಸಭೆ ಮಾಜಿ ಅಧ್ಯಕ್ಷರುಗಳಾದ ಹೆಚ್.ಮಂಜಪ್ಪ, ಸಿ.ಟಿ.ಕೃಷ್ಣಮೂರ್ತಿ, ಹೆಚ್.ಸಿ.ನಿರಂಜನಮೂರ್ತಿ, ಮಹಿಳಾ ಘಟಕದ ಜಿಲ್ಲಾಧ್ಯಕ್ಷ ಗೀತ ನಂದಿನಿಗೌಡ, ಮೋಕ್ಷರುದ್ರಸ್ವಾಮಿ, ಪರಿಶಿಷ್ಟ ಜಾತಿ ವಿಭಾಗ ಅಧ್ಯಕ್ಷ ಎಸ್.ಜಯಣ್ಣ, ಎಸ್ಟಿ.ವಿಭಾಗದ ಅಧ್ಯಕ್ಷ ಮಂಜುನಾಥ್, ಪ್ರಕಾಶ್ ರಾಮನಾಯ್ಕ, ಹನೀಸ್, ಜಿ.ವಿ.ಮಧುಗೌಡ, ಮೋಹನ್ ಪೂಜಾರಿ, ಯು.ಲಕ್ಷ್ಮಿಕಾಂತ್ ಸೇರಿದಂತೆ ವಿವಿಧ ಮುಂಚೂಣಿ ಘಟಕಗಳ ಅಧ್ಯಕ್ಷರುಗಳು ವೇದಿಕೆಯಲ್ಲಿದ್ದರು.

# ಬೇಸಿಗೆ ಶಿಬಿರದ ಸಮಾರೋಪ ಸಮಾರಂಭ

» **ಚಿತ್ರದುರ್ಗ**



ಮಕ್ಕಳಿಗೆ ಶಾಲೆಯಲ್ಲಿ ಪಠ್ಯ ಎಷ್ಟು ಮುಖ್ಯವೂ ಅಷ್ಟೇ ಪ್ರಮಾಣದಲ್ಲಿ ಬೇಸಿಗೆ ಸಮಯದಲ್ಲಿ ಇಂತಹ ಶಿಬಿರಗಳಿಗೆ ತಮ್ಮ ಮಕ್ಕಳನ್ನು ಕಳುಹಿಸುವುದರ ಮೂಲಕ ಅವರು ದೈಹಿಕವಾಗಿ ಸದೃಢವಾಗಲು ನೆರವಾಗಬೇಕಿದೆ ಎಂದು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಪೋಷಕರಿಗೆ ತಿಳಿ ಹೇಳಿದರು.

ಚಿತ್ರದುರ್ಗ ನಗರದ ಸ್ಟೇಡಿಯಂ ಯೂತ್ಸ್ ಅಥ್ಲೆಟಿಕ್ ಅಕಾಡೆಮಿ ವತಿಯಿಂದ ಜಿಲ್ಲಾ ಕ್ರೀಡಾಂಗಣದಲ್ಲಿ ಸಂಜೆ ಹಮ್ಮಿಕೊಳ್ಳಲಾಗಿದ್ದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭದಲ್ಲಿ ಶಿಬಿರದಲ್ಲಿ ಭಾಗವಹಿಸಿದ್ದ ಮಕ್ಕಳಿಗೆ ಪ್ರಮಾಣಪತ್ರವನ್ನು ವಿತರಿಸಿ ಮಾತನಾಡಿದ ಅವರು, ಇಂದಿನ ಕಾಲದಲ್ಲಿ ಮಕ್ಕಳು ಮೈದಾನಕ್ಕೆ ಬಂದು ಆಡುವ ಪ್ರಸಂಗಗಳು ಬಹಳ ಕಡಿಮೆ ಇದೆ ಅದರೆ ನಮ್ಮ ಕಾಲದಲ್ಲಿ ಬೇಸಿಗೆ ರಜೆಯಲ್ಲಿ ನಮ್ಮ ಅಜ್ಜನ ಮನೆಗೆ ಹೋಗಿ ಅಲ್ಲಿ ಮರಕೋತಿ, ಚಿನ್ನಿದಾಂಡು, ಗೋಲಿ, ಬುಗರಿ, ಕರೆ ಅಥವಾ ಭಾವಿಯಲ್ಲಿ ಈಜುವುದು ಸೇರಿದಂತೆ ಇತರೆ ವಿವಿಧ ರೀತಿಯ ಆಟಗಳನ್ನು ಆಡಲಾಗುತ್ತಿತ್ತು ಈ ರೀತಿಯಾದ ಬೇಸಿಗೆ ಶಿಬಿರಗಳು ಇರಲಿಲ್ಲ ಅಜ್ಜಿ,ಅಜ್ಜನ ಊರುಗಳೇ ನಮಗೆ ಬೇಸಿಗೆ ಶಿಬಿರದ ರೀತಿಯಲ್ಲಿ ಇದ್ದವು ಎಂದು ತಮ್ಮ ಬಾಲ್ಯದ ನೆನೆಪನ್ನು ಸಭಿಕರ ಮುಂದೆ ಬಿಚ್ಚಿಟ್ಟರು.

ಇಂದಿನ ಮಕ್ಕಳಿಗೆ ಆಟ ಎಂದರೆ ಬರಿ ಕ್ರಿಕೇಟ್ ಎಂದು ಮಾತ್ರ ಅರ್ಥವಾಗುತ್ತದೆ ಇದನ್ನು ಬಿಟ್ಟು ಬೇರೆ ಆಟಗಳು ಸಹಾ ನಮ್ಮಲ್ಲಿ ಇವೆ ಎಂಬುದನ್ನು ಮರೆಯಲಾಗಿದೆ.

ಇದ್ದಲ್ಲದೆ ಮನೆಯಲ್ಲಿ ಮೊಬೈಲ್ ಅಥವಾ ಮನೆಯಲ್ಲಿ ಇಂಟರ್‌ನೆಟ್ ಇದ್ದರೆ ಸಾಕು ಮನೆಯಿಂದಮಕ್ಕಳುಹೊರಗಡೆಯೇಬರುವುದಿಲ್ಲ ಸಂಜೆ ಮೈದಾನದಲ್ಲಿ ಮಕ್ಕಳು ಸಹಾ ಕಾಣುವುದು ಕಡಿಮೆಯಾಗಿದೆ, ಪೋಷಕರು ಮಕ್ಕಳಿಗೆ ಯಾವ ರೀತಿ ಅಂಕಗಳನ್ನು ಪಡೆಯಲು ಪ್ರೋತ್ಸಾಹ ನೀಡಲಾಗುತ್ತದೆ ಅದೇ ರೀತಿ ಬೇಸಿಗೆ ಸಮಯದಲ್ಲಿ ಇಂತಹ ಶಿಬಿರಗಳಿಗೆ ಕಲಿಸುವುದರ ಮೂಲಕ ತಮ್ಮ ಮಕ್ಕಳನ್ನು ಬಲಿಷ್ಠರನ್ನಾಗಿ ಮಾಡಬೇಕಿದೆ. ಇದಕ್ಕೆ ಕ್ರೀಡೆಯೊಂದೇ ದಾರಿಯಾಗಿದೆ ಇದರಿಂದ ದೇಶಕ್ಕೆ ಉತ್ತಮವಾದ ಆರೋಗ್ಯವಂತ ಪ್ರಜೆಗಳನ್ನು ನೀಡಲು ಸಾಧ್ಯವಾಗುತ್ತದೆ ಎಂದರು.

ಸಂಘಟಕರಾದ ಸತೀಶ್ ಮಾತನಾಡಿ, ಕಳೆದ ಹಲವಾರು ವರ್ಷಗಳಿಂದ ಇಲ್ಲಿ ಬೇಸಿಗೆ ಶಿಬಿರವನ್ನು ನಡೆಸಲಾಗುತ್ತಿದೆ ಇದಕ್ಕೆ ಪೋಷಕರು ಸಹಾ ಪ್ರೋತ್ಸಾಹವನ್ನು ನೀಡುವುದರ ಮೂಲಕ ತಮ್ಮ ಮಕ್ಕಳನ್ನು ಶಿಬಿರಕ್ಕೆ ಕಳುಹಿಸುತ್ತಿದ್ದಾರೆ. ಇಂತಹ ಶಿಬಿರಗಳಲ್ಲಿ ಮಕ್ಕಳು ಸಕ್ರಿಯವಾಗಿ ಭಾಗವಹಿಸುವುದರಿಂದ ಅವರ ದೈಹಿಕ ಬೆಳವಣಿಗೆಗೆ ಸಹಕಾರಿಯಾಗಲಿದೆ.

ಕ್ರೀಡೆಯಲ್ಲಿ ಭಾಗವಹಿಸುವುದರಿಂದ ಮಕ್ಕಳಲ್ಲಿ ದುರಾಭ್ಯಾಸ ಬರುವುದಿಲ್ಲ, ಇತರರೊಂದಿಗೆ ಸ್ನೇಹ ಉಂಟಾಗುತ್ತದೆ. ಇಲ್ಲಿ ಹೇಳಿಕೊಟ್ಟ ಪಾಠವನ್ನು ಇಲ್ಲಿಗೆ ನಿಲ್ಲಿಸಬೇಡಿ ಇದು ನಿರಂತರವಾಗಿ ಇರಬೇಕಿದೆ ಎಂದರು.

### ಕಾಶ್ಮೀಕರ ಪಹಲ್ಗಾಮ್‌ನಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಅರ್ಪಿಸಿದ ನಾಯಕನಹಟ್ಟಿ ಬಿಜೆಪಿ ಮಂಡಲ



» **ಚಳ್ಳಕೆರೆ**

ಕಾಶ್ಮೀರ ಪಹಲ್ಗಾಮ್‌ನಲ್ಲಿ ಉಗ್ರಗಾಮಿಗಳು ಹಿಂದೂಗಳ ಮೇಲೆ ದಾಳಿ ಮಾಡಿ ಸುಮಾರು 28ಕ್ಕೂ ಹೆಚ್ಚು ಭಾರತೀಯರನ್ನು ಬಲಿಪಡೆದ ಉಗ್ರರಿಗೆ ತಕ್ಕ ಉತ್ತರ ನೀಡಬೇಕು, ದಾಳಿಯಲ್ಲಿ ಮಡಿದ ಭಾರತೀಯರ ಆತ್ಮಕ್ಕೆ ಶಾಂತಿದೊರೆಯಬೇಕೆಂದು ನಾಯಕನಹಟ್ಟಿ ಬಿಜೆಪಿಮಂಡಲವತಿಯಿಂದ ಮೇಣದಬತ್ತಿ ಹಿಡಿದು ಶ್ರದ್ಧಾಂಜಲಿ ಅರ್ಪಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾ ಎಸ್ಟಿಮೋರ್ಚಾ ಅಧ್ಯಕ್ಷ ಪಿ.ಶಿವಣ್ಣ, ಕಳೆದ ಹತ್ತುಗಳಿಂದ ಶಾಂತವಾಗಿದ್ದ ಕಾಶ್ಮೀರದಲ್ಲಿ ರಕ್ತಹರಿಸುವ ಮೂಲಕ ಪ್ರವಾಸಕ್ಕೆ ತೆರಳಿದ್ದ ಹಿಂದೂಗಳ ಮೇಲೆ ದಾಳಿ ನಡೆಸಿ ಅವರ ಸಾವಿಗೆ ಕಾರಣರಾದ ಪಾಕ್ ಉಗ್ರರನ್ನು ಸದೆಬಡಿಯಬೇಕು, ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿ ಅವರಿಗೆ ತಕ್ಕ ಉತ್ತರ ನೀಡುವ ಮೂಲಕ ಮಡಿದ ಭಾರತೀಯರ ಆತ್ಮಶಾಂತಿ ನೀಡಬೇಕು, ಕಾಶ್ಮೀರದ ಕಣಿವೆಯಲ್ಲಿ ಅಟ್ಟಹಾಸ ಮೆರೆದು ಗುಡ್ಡಿಕ್ಕಿ ಕೊಲೆಗೈದ ಟೆರರಿಸ್ಟ್‌ಗಳ ಹೆಡೆಮುರಿಕಟ್ಟಬೇಕೆಂದು ಆಗ್ರಹಿಸಿದರು. ಮಾಜಿ ಮಂಡಲಾಧ್ಯಕ್ಷ ಎಂವೈಟಿಸ್ವಾಮಿ, ಪಟ್ಟಣಪಂಚಾಯಿತಿ ಸದಸ್ಯ ಮಹಾಂತಣ್ಣ, ಮಂಡಲ ಪ್ರಧಾನಕಾರ್ಯದರ್ಶಿ ಬೆಂಕಿಗೋವಿಂದಪ್ಪ, ಚನ್ನಗಾನಹಳ್ಳಿಮಲ್ಲೇಶ್ ಮುಂತಾದವರು ಭಾಗವಹಿಸಿದ್ದರು.

**ಪ್ರಮುಖ ಸುದ್ದಿ**

# ಉಗ್ರರ ಗುಂಡಿಗೆ ಬಲಿಯಾದ ಭಾರತೀಯರಿಗೆ ಶ್ರದ್ಧಾಂಜಲಿ

» **ಚಳ್ಳಕೆರೆ**



ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ನಡೆದ ಘಟನೆಯನ್ನು ವಿಶ್ವಹಿಂದೂಪರಿಷತ್, ಭಜರಂಗದಳ, ವಿವಿಧ ಸಂಘ ಸಂಸ್ಥೆಗಳ ಪ್ರತಿನಿಧಿಗಳು ಖಂಡಿಸಿ, ಘಟನೆಯಲ್ಲಿ ಮಡಿದವರಿಗೆ ಶ್ರದ್ಧಾಂಜಲಿ ಅರ್ಪಿಸಿದರು.

ವಿಶ್ವಹಿಂದೂಪರಿಷತ್ ಜಿಲ್ಲಾ ಉಪಾಧ್ಯಕ್ಷ ಡಾ.ಡಿ.ಎನ್.ಮಂಜುನಾಥ ಮಾತನಾಡಿ, ಕಾಶ್ಮೀರದ ಪಹಲ್ಗಾಮ್ ಪ್ರದೇಶದಲ್ಲಿ ಕುಟುಂಬದೊಡನೆ ಪ್ರವಾಸಕ್ಕೆ ತೆರಳಿದ ವೇಳೆ ನಿದ್ರಾಕ್ಷಣ್ಯವಾಗಿ ಅವರ ಮೇಲೆ ಗುಂಡು ಹಾರಿಸಿ ಸಾವಿಗೆ ಕಾರಣರಾದ ಪಾಕಿಸ್ತಾನ ಪ್ರೇರಿತ ಭಯೋತ್ಪಾದನ ಚಟುವಟಿಕೆಯನ್ನು ನಾವೆಲ್ಲರೂ ಖಂಡಿಸಬೇಕು. ಮುಂಬರುವ ದಿನಗಳಲ್ಲಿ ಪಾಕಿಸ್ತಾನ ತಾನು ಪ್ರೇರೇಪಿಸಿದ ಹೀನಕೃತ್ಯಕ್ಕೆ ಪಶ್ಚಾತಾಪ ಪಡೆಬೇಕಾಗುತ್ತದೆ ಎಂದರು.

ವಾಲ್ಮೀಕಿ ವೃತ್ತದಿಂದ ಅಂಬೇಡ್ಕರ್, ನೆಹರೂ ವೃತ್ತಕ್ಕೆ ಆಗಮಿಸಿದ ಹಿಂದೂಬಂಧುಗಳು ಮಾನವ ಸರಪಳಿ ರಚಿಸಿ ಪ್ರತಿಭಟಿಸಿದರಲ್ಲದೆ, ಉಗ್ರಗಾಮಿಗಳ ಗುಂಡಿಗೆ ಬಲಿಯಾದವರಿಗೆ ದೀಪಹಚ್ಚಿ ಶ್ರದ್ಧಾಂಜಲಿಯನ್ನು ಸಲ್ಲಿಸಿದರು. ಇಡೀ ಮೆರವಣಿಯುದ್ದಕ್ಕೂ ಉಗ್ರಗಾಮಿಗಳ ವಿರುದ್ಧ ಘೋಷಣೆಗಳು ಕೂಗಿದರು.

ಬಿಜೆಪಿ ಯುವ ಮೋರ್ಚಾ ಮಾಜಿ ಜಿಲ್ಲಾಧ್ಯಕ್ಷ ಕಾಲುವೇಹಳ್ಳಿ ಪಾಲಯ್ಯ ಮಾತನಾಡಿ, ದೇಶದಲ್ಲಿ ಸುಮಾರು 140ಕೋಟಿ ಜನಸಂಖ್ಯೆ ಇದೆ. ಇದರಲ್ಲಿ ಶೇ. 15ರಷ್ಟು ಮಾತ್ರ ಅಲ್ಪಸಂಖ್ಯಾತರು ಇದ್ದಾರೆ. ನೂರಾರು ವರ್ಷಗಳಿಂದ ಭಾರತದಲ್ಲಿ ನೆಮ್ಮದಿಯ ಬದುಕನ್ನು ಸಾಗಿಸುತ್ತಿದ್ದಾರೆ. ಆದರೂ ಸಹ ಒಮ್ಮೆಮ್ಮೆ ಪಾಕಿಸ್ತಾನದ ಪ್ರೇರಿತ ಭಯೋತ್ಪಾದನೆಗೆ ಸಹಕಾರ ನೀಡುತ್ತಿರುವುದು ನೋವಿನ ಸಂಗತಿ ಎಂದರು.

ಖ್ಯಾತಜ್ಯೋತಿಷಿ ಡಾ.ಅನಂತರಾಮ್ ಗೌತಮ್ ಮಾತನಾಡಿ, ಭಯೋತ್ಪಾದನೆ ಎಂಬುವುದು ಭಾರತಕ್ಕೆ ಶಾಪವಾಗಿ ಪರಿಣಮಿಸಿದೆ. ಕೋಟ್ಯಾಂತರ ಹಿಂದೂಗಳ ಭಾವನೆಗೆ ಧಕ್ಕೆಯಾಗುವ ಹಿಂದೂಗಳ ಸ್ವಾಭಿಮಾನವನ್ನು ಕೆಣಕುವ ರೀತಿ ಉಗ್ರಗಾಮಿಗಳು ತಮ್ಮ ಕೃತ್ಯಗಳನ್ನು ಎಸಗುತ್ತಿದ್ಧಾರೆ. ಇದಕ್ಕೆ ತಕ್ಕ ಉತ್ತರ ಕೇಂದ್ರ ಸರ್ಕಾರ ನೀಡಬೇಕೆಂದರು. ಬಾಳೆಮಂಡಿ ರಾಮದಾಸ್, ಡಿ.ಎಂ.ತಿಪ್ಪೇಸ್ವಾಮಿ, ಡಾ.ಕೆ.ಎಂ.ಜಯಕುಮಾರ್, ಡಾ.ಎಲ್.ಎಸ್.ವೀರೇಶ್, ಪಿ.ತಿಪ್ಪೇಸ್ವಾಮಿ(ಪಿಟಿ), ಸಿ.ಶ್ರೀನಿವಾಸ್, ವಿ.ವೈ.ಪ್ರಮೋದ್, ಡಾ.ನಾಗರಾಜು, ಭಜರಂಗದಳದ ಉಮೇಶ್, ಮಹಂತೇಶ್, ಟಿ.ಮಂಜುನಾಥ, ಬೇಕರಿಮಂಜುನಾಥ, ಈಶ್ವರನಾಯಕ, ಕೆ.ಎಂ.ಯತೀಶ್, ಎಂ.ಸತ್ಯನಾರಾಯಣರಾವ್, ಡಿ.ಜಿ.ಪ್ರಕಾಶ್, ಕೆ.ಪಿ.ನಾಗಭೂಷಣ್, ಎಸ್.ಎಂ.ಗಂಗಾಧರಯ್ಯ, ಆರ್.ಜಗದೀಶ್, ಸಿ.ಎಸ್.ಗೋಪಿನಾಥ, ಮಧುಮತಿ, ಶುಭಾ, ಜಗದಾಂಭ, ಶಾಂತಲಾ ಮುಂತಾದವರು ಪಾಲ್ಗೊಂಡಿದ್ದರು. ಡಿವೈಎಸ್ಪಿ ಟಿ.ಬಿ.ರಾಜಣ್ಣ, ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್‌ದೇಸಾಯಿ, ಪಿಎಸ್‌ಐ ಧರೆಪ್ಪಬಾಳಪ್ಪದೊಡ್ಡಮನಿ ಸೂಕ್ತಬಂದೋಬಸ್ತ್ ಏರ್ಪಡಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T